ಸಂಪುಟ : 11 ಸಂಚಿಕೆ: 135 ಪುಟ : 4+2 ಬೆಲೆ: 3.00 ಮಂಗಳವಾರ ಜೂನ್ 30 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 135 Pages : 4+2 Price : 3.00 Tuesday june 30 2026 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ನಾಳೆ ಕಾಂಗ್ರೆಸ್ ಪ್ರಚಾರ ಸಮಿತಿಯ ರಾಜ್ಯಮಟ್ಟದ ವಿಚಾರ ಸಂಕೀರಣ

■ ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ಪ್ರದೇಶ ಕಾಂಗ್ರೆಸ್ ಪ್ರಚಾರ ಸಮಿತಿಯ ವತಿಯಿಂದ ನಾಳೆ (ಜುಲೈ 1) ಬೆಳಿಗ್ಗೆ 10.30ಕ್ಕೆ ಬೆಂಗಳೂರಿನ ಕೆಪಿಸಿಸಿ ಭಾರತ್ ಜೋಡೋ ಭವನದಲ್ಲಿ ರಾಜ್ಯಮಟ್ಟದ ಒಂದು ದಿನದ ವಿಚಾರ ಸಂಕೀರಣ ನಡೆಯಲಿದೆ.

ಕೆಪಿಸಿಸಿ ಪ್ರಚಾರ ಸಮಿತಿಯ ರಾಜ್ಯಾಧ್ಯಕ್ಷ ವಿನಯಕುಮಾರ ಸೊರಕೆ ಅವರ ನೇತೃತ್ವದಲ್ಲಿ ನಡೆಯಲಿರುವ ಈ ವಿಚಾರ ಸಂಕೀರಣದಲ್ಲಿ ಕೆಪಿಸಿಸಿ ಪ್ರಚಾರ ಸಮಿತಿಯ ರಾಜ್ಯ ಪದಾಧಿಕಾರಿಗಳು, ಜಿಲ್ಲಾ ಅಧ್ಯಕ್ಷರು, ಉಪಾಧ್ಯಕ್ಷರು, ಮುಖ್ಯ ಸಂಯೋಜಕರು ಹಾಗೂ ಬ್ಲಾಕ್ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಭಾಗವಹಿಸಲಿದ್ದು, ಮುಂಬರುವ ಚುನಾವಣೆ ಹಿನ್ನೆಲೆಯಲ್ಲಿ ಮಹತ್ವದ ಚರ್ಚೆಗಳು ನಡೆಯಲಿವೆ. ಕಾರ್ಯಕ್ರಮದಲ್ಲಿ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹಾಗೂ ಕೆಪಿಸಿಸಿ ಪ್ರಚಾರ ಸಮಿತಿಯ ಸಹ-ಅಧ್ಯಕ್ಷ ಎಲ್. ಹನುಮಂತಯ್ಯ ಭಾಗವಹಿಸಲಿದ್ದಾರೆ.

ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿಯ ಪದಾಧಿಕಾರಿಗಳು ಹಾಗೂ ಜಿಲ್ಲೆಯ ಎಲ್ಲ ಬ್ಲಾಕ್‌ಗಳ ಪ್ರಚಾರ ಸಮಿತಿಯ ಪದಾಧಿಕಾರಿಗಳು ಕಡ್ಡಾಯವಾಗಿ ವಿಚಾರ ಸಂಕೀರಣದಲ್ಲಿ ಭಾಗವಹಿಸುವಂತೆ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

## ಕುಟುಂಬ ಕಲಹ: ಮೊಬೈಲ್ ಟವರ್ ಏರಿದ ವ್ಯಕ್ತಿ..!

■ ವಿಜಯಸಾಕ್ಷಿ ಸುದ್ದಿ, ಗದಗ

ಕುಟುಂಬ ಕಲಹದ ಹಿನ್ನೆಲೆಯಲ್ಲಿ ಮದ್ಯದ ಅಮಲಿನಲ್ಲಿದ್ದ ನಜೀರ್ ಸಾಬ್ ಎಂಬಾತ ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಕೊರ್ಲಹಳ್ಳಿ ಗ್ರಾಮದಲ್ಲಿ ಮೊಬೈಲ್ ಟವರ್ ಏರಿ ಆತಂಕ ಸೃಷ್ಟಿಸಿದ ಘಟನೆ ಸೋಮವಾರ ನಡೆದಿದೆ. ಸ್ಥಳಕ್ಕೆ ಧಾವಿಸಿದ ಮುಂಡರಗಿ ಪೊಲೀಸರು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಮನವೊಲಿಸಿ ಆತನನ್ನು ಸುರಕ್ಷಿತವಾಗಿ ಕೆಳಗಿಳಿಸಿ ವಶಕ್ಕೆ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ.ಸಂಕೀರಣದಲ್ಲಿ ಭಾಗವಹಿಸುವಂತೆ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

### ಆಡಳಿತಾಧಿಕಾರಿ ನೇಮಕ, ನಿವೃತ್ತ ನ್ಯಾಯಾಧೀಶರಿಂದ ತನಿಖೆಗೆ ಆಗ್ರಹ, ಜಿಲ್ಲಾಧಿಕಾರಿಗೆ ಹಿಂದೂ ಸಂಘಟನೆಗಳ ಮನವಿ

# ಪುಣ್ಯಾಶ್ರಮ ವಿವಾದಕ್ಕೆ ಹೊಸ ತಿರುವು..!

■ ವಿಜಯಸಾಕ್ಷಿ ಸುದ್ದಿ, ಗದಗ



ನಾಡಿನ ಹೆಮ್ಮೆಯ ಆಧ್ಯಾತ್ಮಿಕ ಹಾಗೂ ಸಂಗೀತ ಪರಂಪರೆಯ ಪ್ರತೀಕವಾಗಿರುವ ವೀರೇಶ್ವರ ಪುಣ್ಯಾಶ್ರಮದಲ್ಲಿ ಕಳೆದ ಕೆಲವು ವರ್ಷಗಳಿಂದ ನಡೆದಿರುವುದಾಗಿ ಆರೋಪಿಸಲಾಗುತ್ತಿರುವ ಆಡಳಿತಾತ್ಮಕ ಹಾಗೂ ಹಣಕಾಸು ಅವ್ಯವಹಾರಗಳ ಕುರಿತು ಸಮಗ್ರ ತನಿಖೆ ನಡೆಸಬೇಕು. ಆಶ್ರಮವನ್ನು ಸರ್ಕಾರದ ವಶಕ್ಕೆ ಪಡೆದು ಆಡಳಿತಾಧಿಕಾರಿಯನ್ನು ನೇಮಿಸಬೇಕು ಎಂದು ಆಗ್ರಹಿಸಿ ಹಿಂದೂ ಸಂಘಟನೆಗಳ ಹೋರಾಟಗಾರ ರಾಜು ಖಾನಪ್ಪನವರ ನೇತೃತ್ವದಲ್ಲಿ ಸೋಮವಾರ ನೂರಾರು ಕಾರ್ಯಕರ್ತರು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರಿಗೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ರಾಜು ಖಾನಪ್ಪನವರ, ಲಿಂ. ಪಂಚಾಕ್ಷರ ಗವಾಯಿಗಳು ಹಾಗೂ ಲಿಂ. ಪಂ. ಪುಟ್ಟರಾಜ ಕವಿ ಗವಾಯಿಗಳು ಕಟ್ಟಿ ಬೆಳೆಸಿದ ವೀರೇಶ್ವರ ಪುಣ್ಯಾಶ್ರಮವು ಸಾವಿರಾರು ಅಂಧ ಹಾಗೂ ಅನಾಥ ಮಕ್ಕಳಿಗೆ ಶಿಕ್ಷಣ, ಸಂಗೀತ ಮತ್ತು ಆಶ್ರಯ ನೀಡುವ ಮೂಲಕ ಅಪಾರ ಸೇವೆ ಸಲ್ಲಿಸಿದೆ. ಇಂತಹ ಪವಿತ್ರ ಸಂಸ್ಥೆಯಲ್ಲಿ ನಡೆಯುತ್ತಿರುವುದಾಗಿ ಹೇಳಲಾಗುತ್ತಿರುವ ಬೆಳವಣಿಗೆಗಳು ಭಕ್ತರಲ್ಲಿ ಆತಂಕ ಮೂಡಿಸಿವೆ ಎಂದು ಹೇಳಿದರು.

ಆಶ್ರಮಕ್ಕೆ ನಾಡಿನ ಮೂಲೆಮೂಲೆಗಳಿಂದ ಭಕ್ತರು ಹಣ, ದವಸ-ಧಾನ್ಯ ಹಾಗೂ ಇತರೆ ದೇಣಿಗೆಗಳನ್ನು ನೀಡುತ್ತಿದ್ದಾರೆ.

▸▸ 3ನೇ ಪುಟಕ್ಕೆ

> "ವೀರೇಶ್ವರ ಪುಣ್ಯಾಶ್ರಮದ ಬಗ್ಗೆ ನಮಗೆ ಅಪಾರ ಗೌರವವಿದೆ. ನಮ್ಮ ಹೋರಾಟ ಆಶ್ರಮದ ವಿರುದ್ಧವಲ್ಲ, ಆಶ್ರಮದಲ್ಲಿ ನಡೆಯುತ್ತಿರುವುದಾಗಿ ಆರೋಪಿಸಲಾಗುತ್ತಿರುವ ಅಧಿಕಾರ ದುರ್ಬಳಕೆ ಹಾಗೂ ಅನಧಿಕೃತ ಹಸ್ತಕ್ಷೇಪದ ವಿರುದ್ಧವಾಗಿದೆ."
> **– ರಾಜು ಖಾನಪ್ಪನವರ,** ಹಿಂದೂ ಸಂಘಟನೆಗಳ ಹೋರಾಟಗಾರ

> "ವೀರೇಶ್ವರ ಪುಣ್ಯಾಶ್ರಮದಲ್ಲಿ ನಡೆದಿರುವ ಎಲ್ಲ ಆರೋಪಗಳ ಕುರಿತು ಸಮಗ್ರ ತನಿಖೆ ನಡೆಯಬೇಕು. ಆಶ್ರಮದಲ್ಲಿ ಉಂಟಾಗಿರುವ ಗೊಂದಲವನ್ನು ಹಿರಿಯ ಯತಿಗಳು ಮಧ್ಯಪ್ರವೇಶಿಸಿ ಶಾಂತಿಯುತವಾಗಿ ಬಗೆಹರಿಸಬೇಕು."
> **– ಮಗಚ ಡಾ. ವೀರಭದ್ರ ಶಿವಾಚಾರ್ಯ** ಮಹಾಸ್ವಾಮೀಜಿ, ಕದಾಂಪೂರ

### ಮಠದ ಆಡಳಿತ, ಆರ್ಥಿಕ ವ್ಯವಹಾರಗಳ ಸಮಗ್ರ ತನಿಖೆಗೆ ಸರ್ಕಾರಕ್ಕೆ ಅನಿಲ ಮೆಣಸಿನಕಾಯಿ ಆಗ್ರಹ

# ಪುಟ್ಟರಾಜ ಗವಾಯಿಗಳ ಮಠದ ಆಡಳಿತ ತನಿಖೆಯಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ಹೆಮ್ಮೆಯ ಆಧ್ಯಾತ್ಮಿಕ ಹಾಗೂ ಸಂಗೀತ ಪರಂಪರೆಯ ಪ್ರತೀಕವಾಗಿರುವ ಶ್ರೀ ವೀರೇಶ್ವರ ಪುಣ್ಯಾಶ್ರಮ ಹಾಗೂ ಪುಟ್ಟರಾಜ ಗವಾಯಿಗಳ ಮಠದ ಆಡಳಿತ ಮತ್ತು ನಿರ್ವಹಣೆಗೆ ಸಂಬಂಧಿಸಿದಂತೆ ಮೂಡಿರುವ ಅನುಮಾನಗಳನ್ನು ನಿವಾರಿಸಲು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಅನಿಲ ಮೆಣಸಿನಕಾಯಿ ಆಗ್ರಹಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಬಡವರು, ಅನಾಥರು ಹಾಗೂ ವಿಶೇಷವಾಗಿ ದೃಷ್ಟಿಹೀನರಿಗೆ ಉಚಿತ ಶಿಕ್ಷಣ, ವಸತಿ ಮತ್ತು ಸಂಗೀತ ಶಿಕ್ಷಣ ನೀಡುವ ಮೂಲಕ ಮಠವು ಸಮಾಜಕ್ಕೆ ಅಪಾರ ಸೇವೆ ಸಲ್ಲಿಸಿದೆ. ಇಂತಹ ಪವಿತ್ರ ಸಂಸ್ಥೆಯ ಘನತೆ ಮತ್ತು ಭಕ್ತರ ನಂಬಿಕೆಗೆ ಯಾವುದೇ ಧಕ್ಕೆಯಾಗಬಾರದು ಎಂದು ತಿಳಿಸಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಮಠದ ಆಡಳಿತ, ಆರ್ಥಿಕ ವ್ಯವಹಾರಗಳು ಹಾಗೂ ಆಸ್ತಿಗಳ ನಿರ್ವಹಣೆ ಕುರಿತಂತೆ ವಿವಿಧ ರೀತಿಯ ಚರ್ಚೆಗಳು ಮತ್ತು ಅನುಮಾನಗಳು ವ್ಯಕ್ತವಾಗುತ್ತಿದ್ದು, ಇದರಿಂದ ಭಕ್ತರಲ್ಲಿ ಆತಂಕ ಮೂಡಿದೆ. ಈ ಹಿನ್ನೆಲೆಯಲ್ಲಿ ಸರ್ಕಾರ ಮಠದ ಆಡಳಿತ, ಆರ್ಥಿಕ ವ್ಯವಹಾರಗಳು ಹಾಗೂ ಆಸ್ತಿ ನಿರ್ವಹಣೆ ಕುರಿತು ಸಮಗ್ರ ತನಿಖೆ ನಡೆಸಬೇಕು.



ಅಗತ್ಯವಿದ್ದಲ್ಲಿ ಸಂಬಂಧಿತ ತನಿಖಾ ಸಂಸ್ಥೆಗಳ ಮೂಲಕ ಪರಿಶೀಲನೆ ನಡೆಸಿ, ಸತ್ಯಾಂಶವನ್ನು ಸಾರ್ವಜನಿಕರ ಮುಂದಿಡಬೇಕು ಎಂದು ಒತ್ತಾಯಿಸಿದ್ದಾರೆ.

ಮಠದ ಮೂಲ ಉದ್ದೇಶಗಳಾದ ಶಿಕ್ಷಣ, ಅನ್ನದಾಸೋಹ, ಸಂಗೀತ ಸೇವೆ ಹಾಗೂ ಸಮಾಜಮುಖಿ ಚಟುವಟಿಕೆಗಳಿಗೆ ಯಾವುದೇ ರೀತಿಯ ಧಕ್ಕೆಯಾಗದಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು. ಜೊತೆಗೆ ಮಠದ ಗೌರವ, ಪರಂಪರೆ ಹಾಗೂ ಭಕ್ತರ ನಂಬಿಕೆಯನ್ನು ಉಳಿಸುವ ಪಾರದರ್ಶಕ ಆಡಳಿತ ವ್ಯವಸ್ಥೆ ಜಾರಿಯಾಗಬೇಕು ಎಂದು ತಿಳಿಸಿದ್ದಾರೆ.

> "ಇದು ಯಾವುದೇ ವ್ಯಕ್ತಿ ಅಥವಾ ಸಮುದಾಯದ ವಿರುದ್ಧದ ಆರೋಪವಲ್ಲ. ಪುಟ್ಟರಾಜ ಗವಾಯಿಗಳ ಆದರ್ಶ, ಮಠದ ಪಾವಿತ್ರ್ಯ ಮತ್ತು ಲಕ್ಷಾಂತರ ಭಕ್ತರ ನಂಬಿಕೆಯನ್ನು ಉಳಿಸುವ ಉದ್ದೇಶದಿಂದ ಪಾರದರ್ಶಕ ತನಿಖೆಗೆ ಆಗ್ರಹಿಸುತ್ತಿದ್ದೇವೆ."
> **– ಅನಿಲ ಮೆಣಸಿನಕಾಯಿ**

ತಪ್ಪುಗಳು ಕಂಡುಬಂದರೆ ಕಾನೂನು ಪ್ರಕಾರ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು. ಯಾವುದೇ ಅಕ್ರಮ ಕಂಡುಬರದಿದ್ದರೆ ಸಾರ್ವಜನಿಕರಲ್ಲಿ ಸ್ಪಷ್ಟತೆ ಮೂಡಿಸುವ ಅಧಿಕೃತ ವರದಿಯನ್ನು ಪ್ರಕಟಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.


### ಕಾರ ಹುಣ್ಣಿಮೆ ಅಂಗವಾಗಿ ಸಂಪ್ರದಾಯದ ವೈಭವ; ಸಾವಿರಾರು ಜನರ ಸಮ್ಮುಖದಲ್ಲಿ ಕಣ್ಮನ ಸೆಳೆದ ಎತ್ತುಗಳ ಓಟ

## ಕರಿ ಹರಿದ ಸಂಭ್ರಮಕ್ಕೆ ಮಳೆರಾಯನ ಸಾಥ್..!

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮುಂಗಾರು ಆರಂಭದ ರೈತರ ಮೊದಲ ಹಬ್ಬವಾದ ಕಾರ ಹುಣ್ಣಿಮೆಯನ್ನು ಸೋಮವಾರ ಲಕ್ಷ್ಮೇಶ್ವರ ಪಟ್ಟಣ ಹಾಗೂ ಗ್ರಾಮೀಣ ಭಾಗಗಳಲ್ಲಿ ಸಂಭ್ರಮ, ಸಡಗರ ಮತ್ತು ಸಂಪ್ರದಾಯಬದ್ಧವಾಗಿ ಆಚರಿಸಲಾಯಿತು. ಉತ್ತಮ ಮುಂಗಾರು ಮಳೆ ಮತ್ತು ಸಮೃದ್ಧ ಬೆಳೆಗಾಗಿ ರೈತ ಸಮುದಾಯ ಆಚರಿಸುವ ಈ ಹಬ್ಬದಲ್ಲಿ ಕರಿ ಹರಿಯುವ ಸಂಪ್ರದಾಯ ವಿಶೇಷ ಆಕರ್ಷಣೆಯಾಗಿತ್ತು.

ಸಂಪ್ರದಾಯದಂತೆ ಹುಲಗೇರಿ ಬಣದಲ್ಲಿ ಪಾಟೀಲಕುಲಕರ್ಣಿ ಮನೆತನದವರು ನಂದೆಣ್ಣವರ ಕುಟುಂಬಕ್ಕೆ ಕರಿ ಕಟ್ಟಲು ನೀಡಿ, ಸೊಪ್ಪಿನಕೇರಿ ಓಣಿಯ ಹಿರಿಯರು ಕರಿ ಹರಿಯುವ ಆಚರಣೆಗೆ ಚಾಲನೆ ನೀಡಿದರು.



**ಏಕೆ ಆಚರಿಸುತ್ತಾರೆ ಕಾರ ಹುಣ್ಣಿಮೆ?**

ಮುಂಗಾರು ಉತ್ತಮವಾಗಲಿ, ಜಾನುವಾರುಗಳು ಆರೋಗ್ಯವಾಗಿರಲಿ ಹಾಗೂ ಸಮೃದ್ಧ ಬೆಳೆ ಬರಲಿ ಎಂಬ ಆಶಯದಿಂದ ರೈತರು ಕಾರ ಹುಣ್ಣಿಮೆಯನ್ನು ಆಚರಿಸುತ್ತಾರೆ. ಕರಿ ಹರಿಯುವ ಸಂಪ್ರದಾಯವು ಪ್ರಕೃತಿ, ಕೃಷಿ ಮತ್ತು ರೈತನ ಬದುಕಿನ ನಡುವಿನ ಅವಿನಾಭಾವ ಸಂಬಂಧದ ಸಂಕೇತವಾಗಿದೆ.

ಬೆಳಗ್ಗೆಯೇ ರೈತರು ತಮ್ಮ ಎತ್ತುಗಳಿಗೆ ಸ್ನಾನ ಮಾಡಿಸಿ, ಎಳ್ಳೆಣ್ಣೆ, ಮಜ್ಜಿಗೆ, ಅರಿಶಿಣ, ಉಪ್ಪು ಹಾಗೂ ತತ್ತಿಯನ್ನು ಹಚ್ಚಿ, ರೋಗರುಜಿನಗಳಿಂದ ರಕ್ಷಣೆ ಸಿಗಲಿ ಎಂಬ ನಂಬಿಕೆಯಿಂದ ಪೂಜೆ ಸಲ್ಲಿಸಿದರು. ಬಳಿಕ ಕೋಡಿನ ತುದಿಗೆ ತಾಮ್ರದ ಕೊಂಬೆಣಸು ಅಳವಡಿಸಿ, ರಿಬ್ಬನ್, ಬಲೂನ್ ಹಾಗೂ ಗಜ್ಜೆಪಟ್ಟಿಗಳಿಂದ ಎತ್ತುಗಳನ್ನು ಅಲಂಕರಿಸಿದರು.

ಗೋಧೂಳಿ ವೇಳೆಯಲ್ಲಿ ವಿಶೇಷವಾಗಿ ಸಿಂಗರಿಸಿದ ಎತ್ತು ಹಾಗೂ ಹೋರಿಗಳನ್ನು ಊರ ಅಗಸಿ ರಸ್ತೆಯಲ್ಲಿ ಓಡಿಸಲಾಯಿತು. ಮೊದಲು ಕೊಬ್ಬರಿ ಸರವನ್ನು ಹರಿದು ಮುಂದೆ ಸಾಗುವ ಎತ್ತನ್ನೇ "ಕರಿ ಹರಿದ ಎತ್ತು" ಎಂದು ಪರಿಗಣಿಸುವ ಸಂಪ್ರದಾಯವಿದೆ.

▸▸ 3ನೇ ಪುಟಕ್ಕೆ

### ಮೈಸೂರು, ಚಾಮರಾಜನಗರ ಪ್ರಕರಣಗಳ ಆರೋಪಿಗಳಿಗೆ ಕಠಿಣ ಶಿಕ್ಷೆಗೆ ಉಪ್ಪಾರ ಸಮಾಜ ಆಗ್ರಹ

## ಉಪ್ಪಾರ ಕುಟುಂಬಕ್ಕೆ ನ್ಯಾಯ ಕೊಡಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಉಪ್ಪಾರ ಸಮಾಜದ ಕುಟುಂಬಗಳಿಗೆ ಆಗಿರುವ ಅನ್ಯಾಯದ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸುವಂತೆ ಆಗ್ರಹಿಸಿ ಜಿಲ್ಲಾ ಮಹರ್ಷಿ ಭಗೀರಥ ಉಪ್ಪಾರ ಸಂಘದ ನೇತೃತ್ವದಲ್ಲಿ ಸೋಮವಾರ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.



ಮನವಿಯಲ್ಲಿ, ಮೈಸೂರು ಜಿಲ್ಲೆಯ ಟಿ. ನರಸೀಪುರ ತಾಲೂಕಿನ ಕೆಂಪಯ್ಯನಹುಂಡಿ ಗ್ರಾಮದಲ್ಲಿ ಉಪ್ಪಾರ ಸಮಾಜದ ಒಂದೇ ಕುಟುಂಬದ ಶಿವಣ್ಣ, ನಾಗರತ್ನ ಹಾಗೂ ರಕ್ಷಿತಾ ಮೃತಪಟ್ಟಿರುವ ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸಿ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಲಾಗಿದೆ.

ಕುಟುಂಬದವರು ಡೆತ್‌ನೋಟ್ ಬರೆದು ಆತ್ಮಹತ್ಯೆ ಮಾಡಿಕೊಂಡಿದ್ದು, ಉಲ್ಲಾಸಗೌಡ ಎಂಬಾತನ ಕಿರುಕುಳ ಮತ್ತು ಕಿರುಕುಳದಿಂದ ಉಂಟಾದ ಮಾನಸಿಕ ವೇದನೆಯೇ ಈ ದುರಂತಕ್ಕೆ ಕಾರಣ ಎಂದು ಆರೋಪಿಸಲಾಗಿದೆ. ಈ ಪ್ರಕರಣದ ಸತ್ಯಾಸತ್ಯತೆ ಪರಿಶೀಲಿಸಿ, ತಪ್ಪಿತಸ್ಥನ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ.

ಇದೇ ವೇಳೆ, ಚಾಮರಾಜನಗರ ಜಿಲ್ಲೆಯ ಮಸಣಾಪುರ ಗ್ರಾಮದಲ್ಲಿ ಉಪ್ಪಾರಶೆಟ್ಟರ್ ಚಂದ್ರು ಎಂಬ ಯುವಕನನ್ನು ಕಂಬಕ್ಕೆ ಕಟ್ಟಿ ಹಲ್ಲೆ ನಡೆಸಿದ ಪ್ರಕರಣವನ್ನು ಖಂಡಿಸಿರುವ ಸಂಘದ ಮುಖಂಡರು, ಈ ಪ್ರಕರಣದ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಒತ್ತಾಯಿಸಿದರು.

ಮುಖ್ಯಮಂತ್ರಿ, ಗೃಹ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಎರಡೂ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ, ಸಂತ್ರಸ್ತ ಕುಟುಂಬಗಳಿಗೆ ನ್ಯಾಯ ಒದಗಿಸಬೇಕು. ಆರೋಪಿಗಳಿಗೆ ನೀಡುವ ಶಿಕ್ಷೆ ಇಂತಹ ಘಟನೆಗಳು ಮರುಕಳಿಸದಂತೆ ಮಾದರಿಯಾಗಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಭೀಮನಗೌಡ ಪಾಟೀಲ, ಪ್ರಧಾನ ಕಾರ್ಯದರ್ಶಿ ರಾಜು ಗದ್ದಿ, ಉಪಾಧ್ಯಕ್ಷ ಹನಮಂತ ಗೊಟಗೊಂಡ, ಶಿವಪುತ್ರಪ್ಪ ಕುಂದ್ರಳ್ಳಿ, ಮಹಾದೇವಪ್ಪ ಪ್ಯಾಟಿ, ಸದಸ್ಯರಾದ ಪಾಂಡುರಂಗ ಕನಕಾಪೂರ, ಚನ್ನಪ್ಪ ಹಸರುಂಬಿ, ಶಿವರಾಜ ಉಪ್ಪಾರ, ಹನುಮಂತ ತೆಂಗುಂಟಿ, ಸಂತೋಷ ಉಪ್ಪಾರ ಹಾಗೂ ಬಸವಣ್ಣೆಪ್ಪ ಉಪ್ಪಾರ ಉಪಸ್ಥಿತರಿದ್ದರು.

### ಪ್ರದೀಪ್ ಈಶ್ವರ್‌ಗೆ ಜೆಡಿಎಸ್ ಎಚ್ಚರಿಕೆ: ಗ್ಯಾರಂಟಿ ಸಮಿತಿ ವಿಸರ್ಜನೆಗೂ ಆಗ್ರಹ

## ಕುಮಾರಸ್ವಾಮಿ ವಿರುದ್ಧ ವೈಯಕ್ತಿಕ ಟೀಕೆ ನಿಲ್ಲಿಸಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಶಾಸಕ ಪ್ರದೀಪ್ ಈಶ್ವರ್ ಅವರು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಅವಹೇಳನಕಾರಿ ಹಾಗೂ ವೈಯಕ್ತಿಕ ಹೇಳಿಕೆ ನೀಡುವುದನ್ನು ತಕ್ಷಣ ನಿಲ್ಲಿಸಬೇಕು ಎಂದು ಜೆಡಿಎಸ್ ರಾಜ್ಯ ವಕ್ತಾರ ವಿ.ಆರ್. ಗೋವಿಂದಗೌಡ್ರ ಆಗ್ರಹಿಸಿದರು.



ಸೋಮವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪರಿಶ್ರಮ ಅಕಾಡೆಮಿಗೆ ಮೂರು ಸಿಎ ಸೈಟ್ ಮಂಜೂರಾತಿ ಕುರಿತು ನ್ಯಾಯಾಲಯ ಪ್ರಶ್ನಿಸಿರುವ ಸಂದರ್ಭದಲ್ಲಿ ಅದಕ್ಕೆ ಉತ್ತರಿಸುವ ಬದಲು ಕುಮಾರಸ್ವಾಮಿ ವಿರುದ್ಧ ವೈಯಕ್ತಿಕ ಟೀಕೆ ಮಾಡುವುದು ಸರಿಯಲ್ಲ ಎಂದು ಹೇಳಿದರು.

ರಾಜಕಾರಣದಲ್ಲಿ ಮಾತು ಮತ್ತು ನಡವಳಿಕೆಗೆ ಮಿತಿ ಇರಬೇಕು. ಟೀಕೆ-ಟಿಪ್ಪಣಿ ಸಹಜವಾದರೂ ವೈಯಕ್ತಿಕ ನಿಂದನೆ ಸಲ್ಲದು. ಕುಮಾರಸ್ವಾಮಿ ಅವರಿಗೆ ರಾಜ್ಯಾದ್ಯಂತ ಅಪಾರ ಅಭಿಮಾನಿಗಳಿದ್ದು, ಇದೇ ರೀತಿಯ ಭಾಷೆಯನ್ನು ಪ್ರದೀಪ್ ಈಶ್ವರ್ ಮುಂದುವರಿಸಿದರೆ ಅದಕ್ಕೆ ತಕ್ಕ ಪ್ರತಿಕ್ರಿಯೆ ನೀಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಪ್ರದೀಪ್ ಈಶ್ವರ್ ತಾವು ಹಿಂದುಳಿದ ಸಮುದಾಯದ ಶಾಸಕ ಎಂದು ಹೇಳಿಕೊಳ್ಳುತ್ತಾರೆ. ಕಾಂಗ್ರೆಸ್ ಪಕ್ಷದಲ್ಲಿಯೇ ಹಿಂದುಳಿದ ವರ್ಗದ ಅನೇಕ ಹಿರಿಯ ನಾಯಕರು ಮತ್ತು ಶಾಸಕರಿದ್ದು, ಅವರಿಂದ ರಾಜಕೀಯ ಸಂಸ್ಕಾರ ಕಲಿಯಬೇಕು.

> "ರಾಜಕಾರಣದಲ್ಲಿ ಟೀಕೆ ಸಹಜ, ಆದರೆ ವೈಯಕ್ತಿಕ ನಿಂದನೆ ಸರಿಯಲ್ಲ. ಕುಮಾರಸ್ವಾಮಿ ವಿರುದ್ಧದ ಅವಹೇಳನಕಾರಿ ಹೇಳಿಕೆಗಳನ್ನು ಪ್ರದೀಪ್ ಈಶ್ವರ್ ತಕ್ಷಣ ನಿಲ್ಲಿಸಬೇಕು."
> **– ವಿ.ಆರ್. ಗೋವಿಂದಗೌಡ್ರ,** ಜೆಡಿಎಸ್ ರಾಜ್ಯ ವಕ್ತಾರ

▸▸ 3ನೇ ಪುಟಕ್ಕೆ

### ಭೂಮಿ, ವಸತಿ, ಬ್ಯಾಕ್‌ಲಾಗ್ ನೇಮಕಾತಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಸಮಾವೇಶ

## ಜು. 3ರಂದು ದಲಿತ ಜನಾಗ್ರಹ ಸಮಾವೇಶ



■ ವಿಜಯಸಾಕ್ಷಿ ಸುದ್ದಿ, ಗದಗ


ಭೂಮಿ, ವಸತಿ, ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಹಾಗೂ ವಿಶೇಷ ಘಟಕ ಯೋಜನೆಗೆ ಏಕಗವಾಕ್ಷಿ ನೀತಿ ಜಾರಿಗೊಳಿಸುವಂತೆ ಒತ್ತಾಯಿಸಿ ಜುಲೈ 3ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ದಲಿತ ಜನಾಗ್ರಹ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್‌ವಾದ) ಮುಂಡರಗಿ ತಾಲೂಕು ಸಂಚಾಲಕ ಎಚ್.ಡಿ. ಪೂಜಾರ ತಿಳಿಸಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಸಂಸ (ಅಂಬೇಡ್ಕರ್‌ವಾದ) ರಾಜ್ಯಾಧ್ಯಕ್ಷ ಮಾವಳ್ಳಿ ಶಂಕರ ಅವರ ನೇತೃತ್ವದಲ್ಲಿ ನಡೆಯಲಿರುವ ಈ ಸಮಾವೇಶದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ಜನರು ಭಾಗವಹಿಸಲಿದ್ದಾರೆ ಎಂದರು.

ಈ ಹಿಂದೆಯೂ ದಲಿತ ಸಂಘರ್ಷ ಸಮಿತಿ ಐದು ಲಕ್ಷಕ್ಕೂ ಹೆಚ್ಚು ದಲಿತರನ್ನು ಒಗ್ಗೂಡಿಸಿ ಬೃಹತ್ ಸಮಾವೇಶ ನಡೆಸಿದ್ದು, ಅದರ ಫಲವಾಗಿ ರಾಜ್ಯದಲ್ಲಿ ವಸತಿ ಶಾಲೆಗಳು ಆರಂಭಗೊಂಡವು. ಈಗ ಆ ಶಾಲೆಗಳ ಸಂಖ್ಯೆಯನ್ನು ಹೆಚ್ಚಿಸುವುದರ ಜೊತೆಗೆ ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು ಎಂದು ಸಮಾವೇಶದ ಮೂಲಕ ಸರ್ಕಾರವನ್ನು ಒತ್ತಾಯಿಸಲಾಗುವುದು ಎಂದು ಹೇಳಿದರು.

▸▸ 3ನೇ ಪುಟಕ್ಕೆ

## ಮಳೆಯ ನಡುವೆ ಕರಿ ಹರಿಯುವ ಸಂಪ್ರದಾಯ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಕಾರ ಹುಣ್ಣಿಮೆಯ ದಿನ ಮಧ್ಯಾಹ್ನದಿಂದ ಮೋಡ ಕವಿದ ವಾತಾವರಣ ನಿರ್ಮಾಣವಾಗಿ, ಸಂಜೆ ವೇಳೆ ಆಗಿಂದಾಗ್ಗೆ ಸುರಿದ ಮಳೆ ರೈತರಲ್ಲಿ ಹೊಸ ಉತ್ಸಾಹ ಮೂಡಿಸಿತು.

ಮಳೆಯ ನಡುವೆಯೇ ರೈತರು ಕರಿ ಹರಿಯುವ ಸಂಪ್ರದಾಯವನ್ನು ಸಡಗರ-ಸಂಭ್ರಮದಿಂದ ಆಚರಿಸಿದರು. ಅಲಂಕೃತ ಎತ್ತುಗಳನ್ನು ಊರ ಬೀದಿಗಳಲ್ಲಿ ಓಡಿಸಿ, ತಾವೂ ಅವುಗಳೊಂದಿಗೆ ಓಡುತ್ತಾ ಸಂಭ್ರಮದಲ್ಲಿ ಪಾಲ್ಗೊಂಡರು. ಮಳೆರಾಯನ ಆಗಮನ ಹಬ್ಬದ ಉತ್ಸಾಹವನ್ನು ಮತ್ತಷ್ಟು ಹೆಚ್ಚಿಸಿತು.

## ವರುಣನಿಗಾಗಿ ಯುವಕರ ವಿಶೇಷ ಪ್ರಾರ್ಥನೆ..!



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿನ ಸುಗ್ನಳ್ಳಿ ಗ್ರಾಮದಲ್ಲಿ ಕಾರ ಹುಣ್ಣಿಮೆ ಅಂಗವಾಗಿ ನೂರಾರು ಯುವಕರು ಸಂಪ್ರದಾಯಬದ್ಧವಾಗಿ ಗುರ್ಜಿ ಆಟ ಆಡಿ, ಉತ್ತಮ ಮಳೆಯಾಗಲಿ ಎಂದು ವರುಣ ದೇವರಿಗೆ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ಯುವಕರು ಭಕ್ತಿಭಾವದಿಂದ ಗುರ್ಜಿ ಆಟವಾಡಿ, ಉತ್ತಮ ಮಳೆ ಹಾಗೂ ಸಮೃದ್ಧ ಬೆಳೆಗಾಗಿ ಪ್ರಾರ್ಥಿಸಿದರು. ಸಂಪ್ರದಾಯದ ಈ ಆಚರಣೆ ಗ್ರಾಮಸ್ಥರ ಗಮನ ಸೆಳೆಯಿತು.

### ಲಸಿಕೆಯಿಂದ ಯಾವುದೇ ಮಗು ವಂಚಿತವಾಗದಿರಲಿ: ಪ್ರೊ. ಎಸ್.ವಿ. ಸಂಕನೂರ

# ಪೋಲಿಯೊ ಮುಕ್ತ ಭಾರತ ನಮ್ಮ ಗುರಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಪೋಲಿಯೊ ಮುಕ್ತ ಭಾರತ ನಿರ್ಮಾಣದ ಸಂಕಲ್ಪವನ್ನು ಶಾಶ್ವತವಾಗಿ ಉಳಿಸಿಕೊಳ್ಳಲು ಐದು ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ತಪ್ಪದೆ ಪೋಲಿಯೊ ಲಸಿಕೆ ಹಾಕಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವಿ. ಸಂಕನೂರ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ನಗರದ ಎಂಸಿಎಚ್ ಆಸ್ಪತ್ರೆಯಲ್ಲಿ ಭಾನುವಾರ ರಾಷ್ಟ್ರೀಯ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನಕ್ಕೆ ಮಗುವಿಗೆ ಪೋಲಿಯೊ ಲಸಿಕೆ ಹಾಕುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಪೋಲಿಯೊ ಮಕ್ಕಳಲ್ಲಿ ಶಾಶ್ವತ ಅಂಗವೈಕಲ್ಯ ಉಂಟುಮಾಡುವ ಗಂಭೀರ ವೈರಾಣುಜನ್ಯ ಕಾಯಿಲೆಯಾಗಿದ್ದು, ಅದರಿಂದ ರಕ್ಷಿಸಿಕೊಳ್ಳಲು ಪೋಲಿಯೊ ಲಸಿಕೆಯೇ ಅತ್ಯಂತ ಪರಿಣಾಮಕಾರಿ ಮಾರ್ಗವಾಗಿದೆ. ದೇಶದಲ್ಲಿ ಪೋಲಿಯೊ ನಿರ್ಮೂಲನೆಯ ಸಾಧನೆ ಆಗಿದ್ದರೂ, ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ನೋಡಿಕೊಳ್ಳುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಸರ್ಕಾರವು ಉಚಿತವಾಗಿ ಪೋಲಿಯೊ ಲಸಿಕೆ



ನೀಡುತ್ತಿದ್ದು, ಆರೋಗ್ಯ ಇಲಾಖೆ ಸಿಬ್ಬಂದಿ ಮನೆ-ಮನೆಗೆ ತೆರಳಿ ಹಾಗೂ ವಿವಿಧ ಲಸಿಕಾ ಕೇಂದ್ರಗಳಲ್ಲಿ ಮಕ್ಕಳಿಗೆ ಲಸಿಕೆ ನೀಡಲಿದ್ದಾರೆ. ಪೋಷಕರು ಯಾವುದೇ ಆತಂಕವಿಲ್ಲದೆ ಮಕ್ಕಳಿಗೆ ಲಸಿಕೆ ಹಾಕಿಸಬೇಕು ಎಂದು ಅವರು ಕರೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ಜಿಲ್ಲೆಯಾದ್ಯಂತ ಸರ್ಕಾರಿ ಆಸ್ಪತ್ರೆಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ ಲಸಿಕೆ ನೀಡಲು ವ್ಯವಸ್ಥೆ ಮಾಡಲಾಗಿದ್ದು, ಲಸಿಕೆ ಪಡೆಯದೆ ಉಳಿದ ಮಕ್ಕಳಿಗೆ ಮನೆ-ಮನೆಗೆ ತೆರಳಿ ಲಸಿಕೆ ನೀಡಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರೆಗೌಡ್ರ, ಜಿಲ್ಲಾ ನೋಡಲ್ ಅಧಿಕಾರಿ ಡಾ. ಶಿವಕುಮಾರ ಮಾನಕರ, ವೈದ್ಯಾಧಿಕಾರಿಗಳು, ಆರೋಗ್ಯ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

> "ಐದು ವರ್ಷದೊಳಗಿನ ಯಾವುದೇ ಮಗು ಪೋಲಿಯೊ ಲಸಿಕೆಯಿಂದ ವಂಚಿತವಾಗಬಾರದು. ಪ್ರತಿಯೊಬ್ಬ ಪೋಷಕರ ಸಹಕಾರದಿಂದಲೇ ಪೋಲಿಯೊ ಮುಕ್ತ ಭಾರತದ ಸಾಧನೆಯನ್ನು ಶಾಶ್ವತಗೊಳಿಸಲು ಸಾಧ್ಯ."
> – ಪ್ರೊ. ಎಸ್.ವಿ. ಸಂಕನೂರ, ವಿಧಾನ ಪರಿಷತ್ ಸದಸ್ಯ

# ಎಸ್.ಎಸ್.ಕೆ. ತರುಣ ಸಂಘಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಇತ್ತೀಚೆಗೆ ನಡೆದ ಎಸ್.ಎಸ್.ಕೆ. ತರುಣ ಸಂಘದ ವಾರ್ಷಿಕ ಸರ್ವಸಾಧಾರಣ ಸಭೆಯಲ್ಲಿ 2026-27ನೇ ಸಾಲಿನ ನೂತನ ಪದಾಧಿಕಾರಿಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಸಂಘದ ಅಧ್ಯಕ್ಷರಾಗಿ ಶ್ರೀರಾಮು ಸುರೇಂದ್ರಸಾ ಹಬೀಬ, ಉಪಾಧ್ಯಕ್ಷರಾಗಿ



ನಾರಾಯಣಸಾ ರಾಮಚಂದ್ರಸಾ ಕಬಾಡಿ, ಗೌರವ ಕಾರ್ಯದರ್ಶಿಯಾಗಿ ಸುರೇಶ ಸೋಮನಾಥಸಾ ಮೇರವಾಡೆ, ಸಹಕಾರ್ಯದರ್ಶಿಯಾಗಿ ಪರಶುರಾಮ ಹನಮಂತಸಾ ಸೋಳಂಕಿ, ಖಜಾಂಚಿಯಾಗಿ ಸತ್ಯನಾರಾಯಣ ಫಕ್ಕೀರಸಾ ಮೇರವಾಡೆ, ಲೆಕ್ಕ ಪರಿಶೋಧಕರಾಗಿ ನರಸಿಂಗಸಾ ವೆಂಕೂಸಾ ಮೇರವಾಡೆ ಹಾಗೂ ವ್ಯಾಯಾಮಶಾಲೆ ಚೇರ್ಮನ್ ಆಗಿ ವಿನಾಯಕ ಶಂಕರಸಾ ಹಾದಿಮನಿ ಅವರನ್ನು ಆಯ್ಕೆ ಮಾಡಲಾಯಿತು.

ನೂತನವಾಗಿ ಆಯ್ಕೆಯಾದ ಎಲ್ಲ ಪದಾಧಿಕಾರಿಗಳನ್ನು ಪಂಚ ಟ್ರಸ್ಟ್ ಕಮಿಟಿ, ಎಸ್.ಎಸ್.ಕೆ. ತರುಣ ಸಂಘ, ಮಹಿಳಾ ಮಂಡಳಿಯ ಪದಾಧಿಕಾರಿಗಳು, ಸದಸ್ಯರು ಹಾಗೂ ಸಮಾಜದ ಮುಖಂಡರು ಮತ್ತು ಸಮಾಜಬಾಂಧವರು ಅಭಿನಂದಿಸಿ, ಶುಭ ಹಾರೈಸಿದರು.

### ಲಕ್ಷ್ಮೇಶ್ವರದಲ್ಲಿ ನಡೆದ ರಾಷ್ಟ್ರೀಯ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿದ ಡಾ. ಶ್ರೀಕಾಂತ ಕಾಟೇವಾಲೆ

# ಪೋಲಿಯೊ ತಡೆಗೆ ಪೋಷಕರ ಜಾಗೃತಿ ಅಗತ್ಯ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಐದು ವರ್ಷದೊಳಗಿನ ಯಾವುದೇ ಮಗು ಪೋಲಿಯೊ ಲಸಿಕೆಯಿಂದ ವಂಚಿತರಾಗಬಾರದು. ಪ್ರತಿಯೊಬ್ಬ ಪೋಷಕರೂ ತಮ್ಮ ಮಕ್ಕಳಿಗೆ ತಪ್ಪದೇ ಪೋಲಿಯೊ ಲಸಿಕೆ ಹಾಕಿಸುವ ಮೂಲಕ ಅವರ ಆರೋಗ್ಯವನ್ನು ಸುರಕ್ಷಿತಗೊಳಿಸಬೇಕು ಎಂದು ಸಮುದಾಯ ಆರೋಗ್ಯ ಕೇಂದ್ರದ ಆಡಳಿತಾಧಿಕಾರಿ ಡಾ. ಶ್ರೀಕಾಂತ ಕಾಟೇವಾಲೆ ಹೇಳಿದರು.



ಪಟ್ಟಣದ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಪೋಲಿಯೊ ಲಸಿಕಾ ಕಾರ್ಯಕ್ರಮಕ್ಕೆ ಮಕ್ಕಳಿಗೆ ಲಸಿಕೆ ಹಾಕುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ತಾಲೂಕಿನಲ್ಲಿ 0ರಿಂದ 5 ವರ್ಷದೊಳಗಿನ 12,039 ಮಕ್ಕಳಿಗೆ ಪೋಲಿಯೊ ಲಸಿಕೆ ನೀಡುವ ಗುರಿ ಹೊಂದಲಾಗಿದೆ. ಯಾವುದೇ ಕಾರಣಕ್ಕೂ ಒಂದು ಮಗು ಕೂಡ ಲಸಿಕೆಯಿಂದ ವಂಚಿತರಾಗದಂತೆ ಆರೋಗ್ಯ ಇಲಾಖೆ ವಿಶೇಷ ಕ್ರಮ ಕೈಗೊಂಡಿದ್ದು, ಪೋಷಕರು ಈ ಅಭಿಯಾನಕ್ಕೆ ಸಂಪೂರ್ಣ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ತಾಲೂಕಿನಲ್ಲಿ 67 ಪೋಲಿಯೊ ಲಸಿಕಾ ಕೇಂದ್ರಗಳು, 134 ಲಸಿಕಾ ಸಿಬ್ಬಂದಿ ಹಾಗೂ 12 ಮೇಲ್ವಿಚಾರಕರು ಕಾರ್ಯನಿರ್ವಹಿಸುತ್ತಿದ್ದಾರೆ. ಲಸಿಕಾ ದಿನದ ಬಳಿಕವೂ ಮೂರು ದಿನಗಳ ಕಾಲ ಆರೋಗ್ಯ ಸಿಬ್ಬಂದಿ ಮನೆ-ಮನೆಗೆ ಭೇಟಿ ನೀಡಿ ಲಸಿಕೆ ಪಡೆಯದ ಮಕ್ಕಳಿಗೆ ಪೋಲಿಯೊ ಲಸಿಕೆ ನೀಡಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಪ ಆರೋಗ್ಯಾಧಿಕಾರಿ ಸಹದೇವಪ್ಪ ಹನಕನಹಳ್ಳಿ, ತಾಲೂಕು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಆರ್.ವಿ. ಗುರಣ್ಣನವರ, ಡಾ. ಬಿಸ್ಮಿಲ್ಲಾ ವಿ, ಗಂಗಾಧರ ಮೆಣಸಿನಕಾಯಿ, ಬಸವರಾಜ ಚಕ್ರಸಾಲಿ, ಗಿರೀಶ ಚೌರಡ್ಡಿ, ದುಂಡೇಶ ಕೋಟಗಿ, ಸಂಗಮೇಶ ಬೆಳವಲಕೊಪ್ಪ, ರಮೇಶ ಹಾಳದೋಟದ, ಉಳವೇಶಗೌಡ ಪಾಟೀಲ, ಬಸವರಾಜ ಮಡಿವಾಳರ, ಮಂಜುನಾಥ ಗಜಾಕೋಶ, ಮಂಜುನಾಥ ಬಸಾಪುರ, ಪ್ರವೀಣ ಮುದಗಲ್, ವೀರೇಶ ಸಾಸಲವಾಡ ಸೇರಿದಂತೆ ಸಿಬ್ಬಂದಿಗಳಾದ ಸುನೀಲ ಚವ್ಹಾಣ, ರೇಣುಕಾ ಡೊಂಬರ, ಆಶಾ ಭಂಡಾರಿಮಠ, ಸೀಮಾ ಅಮ್ಮಿನಬಾವಿ ಹಾಗೂ ಇತರರು ಉಪಸ್ಥಿತರಿದ್ದರು.

> "ಪೋಲಿಯೊ ನಿರ್ಮೂಲನೆಗೆ ಆರೋಗ್ಯ ಇಲಾಖೆಯಷ್ಟೇ ಅಲ್ಲ, ಪ್ರತಿಯೊಬ್ಬ ಪೋಷಕರ ಸಹಕಾರವೂ ಅತ್ಯಗತ್ಯ."
> – ಡಾ. ಶ್ರೀಕಾಂತ ಕಾಟೇವಾಲೆ

### ಶ್ರೀ ವಿಶ್ವಮಧ್ವ ಮಹಾಪರಿಷತ್‌ನಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ; 35 ಮಂದಿಗೆ ಆರ್ಥಿಕ ನೆರವು

# ಪ್ರತಿಭೆಗೆ ಪ್ರೋತ್ಸಾಹ, ಶಿಕ್ಷಣಕ್ಕೆ ಸಮಾಜದ ಬೆಂಬಲ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಶ್ರೀ ವೀರನಾರಾಯಣ ದೇವಸ್ಥಾನದ ಸಭಾಂಗಣದಲ್ಲಿ ಶನಿವಾರ ಶ್ರೀ ವಿಶ್ವಮಧ್ವ ಮಹಾಪರಿಷತ್, ಗದಗ ಶಾಖೆ ವತಿಯಿಂದ ಬ್ರಾಹ್ಮಣ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಆರ್ಥಿಕ ನೆರವು ವಿತರಣೆ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಡಾ. ಸತೀಶ ಹೊಂಬಾಳಿ ಹಾಗೂ ಪ್ರಾ. ವೆಂಕಟೇಶ ರಾಯಭಟ್ಟ ಭಾಗವಹಿಸಿದ್ದರು.

2025-26ನೇ ಸಾಲಿನ ಎಸ್ಎಸ್ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಶೇ.80ಕ್ಕೂ ಹೆಚ್ಚು ಅಂಕ ಗಳಿಸಿ ಉತ್ತೀರ್ಣರಾದ ವಿದ್ಯಾರ್ಥಿ-ವಿದ್ಯಾರ್ಥಿನಿಯರನ್ನು ಸನ್ಮಾನಿಸಿ



ಗೌರವಿಸಲಾಯಿತು. ದ್ವಿತೀಯ ಪಿಯುಸಿಯ 11 ವಿದ್ಯಾರ್ಥಿಗಳು ಹಾಗೂ ಎಸ್ಎಸ್ಎಲ್‌ಸಿಯ 9 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ, 35 ವಿದ್ಯಾರ್ಥಿಗಳಿಗೆ ಮುಂದಿನ ವಿದ್ಯಾಭ್ಯಾಸಕ್ಕಾಗಿ ಆರ್ಥಿಕ ನೆರವು ವಿತರಿಸಲಾಯಿತು.

ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ನಿರ್ದೇಶಕ ಗುರುರಾಜ ಬಳಗಾನೂರ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಶ್ರೀ ವಿಶ್ವಮಧ್ವ ಮಹಾಪರಿಷತ್ ಗದಗ ಶಾಖೆಯ ಅಧ್ಯಕ್ಷರು, ಸರ್ವ ಸದಸ್ಯರು, ಬ್ರಾಹ್ಮಣ ಸಮಾಜದ ಮುಖಂಡರು, ಸಮಾಜ ಬಾಂಧವರು ಹಾಗೂ ಗಣ್ಯರು ಭಾಗವಹಿಸಿದ್ದರು.

## ಎಸ್‌ಎಸ್‌ಕೆ ಶ್ರೀ ಜಗದಂಬಾ ಮಹಿಳಾ ಮಂಡಳದಿಂದ ನಾರಾಯಣ ರೇಖಿ ಸತ್ಸಂಗ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಸರಾಫ್ ಬಜಾರ್‌ನ ಅಂಬಾಭವಾನಿ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದಲ್ಲಿ ಎಸ್‌ಎಸ್‌ಕೆ ಶ್ರೀ ಜಗದಂಬಾ ಮಹಿಳಾ ಮಂಡಳದ ಆಶ್ರಯದಲ್ಲಿ ನಾರಾಯಣ ರೇಖಿ ಸತ್ಸಂಗ ಭಕ್ತಿಭಾವದಿಂದ ನಡೆಯಿತು.

ಹುಬ್ಬಳ್ಳಿಯ ಪಲ್ಲವಿ ಮಲಾನಿ ಹಾಗೂ ತಂಡದವರ ನೇತೃತ್ವದಲ್ಲಿ ನಡೆದ ಸತ್ಸಂಗದಲ್ಲಿ ಗುರುವಾಣಿ, ನಾರಾಯಣ ಪ್ರಾರ್ಥನೆ ಹಾಗೂ ರಾಮ-ರಾಮ ಜಪ ನಡೆಯಿತು. ನೂರಕ್ಕೂ ಹೆಚ್ಚು ಭಕ್ತರು ಪಾಲ್ಗೊಂಡು ಸಾಮೂಹಿಕ ಭಜನೆಯ ಆಧ್ಯಾತ್ಮಿಕ ಅನುಭೂತಿ ಪಡೆದರು. ಬಳಿಕ ಶಕ್ತಿ ತುಂಬಿದ ಪ್ರಸಾದವನ್ನು ವಿತರಿಸಲಾಯಿತು.

ಸತ್ಸಂಗದಲ್ಲಿ ಮಾತನಾಡಿದ ಪಲ್ಲವಿ ಮಲಾನಿ, ದಿನನಿತ್ಯದ ಬದುಕಿನಲ್ಲಿ ಆತ್ಮಾವಲೋಕನದ ಮೂಲಕ ನಮ್ಮನ್ನು ನಾವು ಹೇಗೆ ಉತ್ತಮಗೊಳಿಸಿಕೊಳ್ಳಬೇಕು ಹಾಗೂ ಜೀವನದ ಜವಾಬ್ದಾರಿಗಳನ್ನು ಪ್ರಾಮಾಣಿಕತೆ, ಪ್ರೀತಿ ಮತ್ತು ಸೇವಾಭಾವದಿಂದ ಹೇಗೆ ನಿರ್ವಹಿಸಬೇಕು ಎಂಬುದನ್ನು ವಿವರಿಸಿದರು.

ಗುರುಗಳಾದ ರಾಜೇಶ್ವರಿ ಮೋದಿಯವರಿಂದ ಸ್ಥಾಪಿತವಾದ ನಾರಾಯಣ ರೇಖಿ ಸತ್ಸಂಗ ಪರಿವಾರದ ಮುಖ್ಯ ಶಾಖೆ ಮುಂಬೈನಲ್ಲಿದ್ದು, ದೇಶದ ವಿವಿಧ ಭಾಗಗಳಲ್ಲಿ ಆಧ್ಯಾತ್ಮಿಕ ಜಾಗೃತಿ ಮೂಡಿಸುವ ಕಾರ್ಯವನ್ನು ನಡೆಸುತ್ತಿದೆ ಎಂದು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಎಸ್‌ಎಸ್‌ಕೆ ಶ್ರೀ ಜಗದಂಬಾ ಮಹಿಳಾ ಮಂಡಳದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸದಸ್ಯರು, ಸಮಾಜದ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಶ್ರೀಮತಿ ರಾಜೇಶ್ವರಿ ಕಾಟೀಗರ್ ಹಾಗೂ ಶ್ರೀಮತಿ ಅನ್ನಪೂರ್ಣ ಭಾಂಡಗೆ ಉಪಸ್ಥಿತರಿದ್ದರು.

### ಗದಗ ಭಾವಸಾರ ವ್ಹಿಜನ್ ಇಂಡಿಯಾದ ಸಹಯೋಗದಲ್ಲಿ ನಡೆದ ಲಸಿಕಾ ಅಭಿಯಾನದಲ್ಲಿ ಡಾ.ಸಂತೋಷ ಹುಯಿಲಗೋಳ

# ಆರೋಗ್ಯಕರ ಸಮಾಜಕ್ಕೆ ಪೋಲಿಯೊ ಲಸಿಕೆ ಅಗತ್ಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಐದು ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ಪೋಲಿಯೋ ಲಸಿಕೆ ತಲುಪಿಸುವ ಮೂಲಕ ಪೋಲಿಯೋ ಮುಕ್ತ ಸಮಾಜ ನಿರ್ಮಾಣ ಮಾಡುವ ಉದ್ದೇಶದಿಂದ ಜಿಲ್ಲಾಡಳಿತ ಹಾಗೂ ಆರೋಗ್ಯ ಇಲಾಖೆ ಹಮ್ಮಿಕೊಂಡಿದ್ದ ವಿಶೇಷ ಪೋಲಿಯೋ ಲಸಿಕಾ ಅಭಿಯಾನಕ್ಕೆ ಗದಗ ಭಾವಸಾರ ವ್ಹಿಜನ್ ಇಂಡಿಯಾ ಸಂಘಟನೆ ಸಹಕಾರ ನೀಡುವ ಮೂಲಕ ಸಾಮಾಜಿಕ ಬದ್ಧತೆಯನ್ನು ಮೆರೆಯಿತು.

ಗದಗ 1ನೇ ವೃತ್ತದ 213ನೇ ಅಂಗನವಾಡಿ ಕೇಂದ್ರದ 13ನೇ ಬೂತ್ ವತಿಯಿಂದ ನಗರದ ಡಾ. ಹುಯಿಲಗೋಳ ಸಿಟಿ ಆಸ್ಪತ್ರೆ



ಆವರಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಡಾ. ಸಂತೋಷ ಹುಯಿಲಗೋಳ ಹಾಗೂ ಶ್ರೀಮತಿ ರೂಪಾ ಹುಯಿಲಗೋಳ ಮಗುವಿಗೆ ಪೋಲಿಯೋ ಲಸಿಕೆ ಹಾಕುವ ಮೂಲಕ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಡಾ. ಸಂತೋಷ ಹುಯಿಲಗೋಳ, ಪೋಲಿಯೋ ರೋಗವು ಮಕ್ಕಳನ್ನು ಶಾಶ್ವತ ಅಂಗವೈಕಲ್ಯಕ್ಕೆ ತಳ್ಳುವ ಅಪಾಯಕಾರಿ ಕಾಯಿಲೆಯಾಗಿದ್ದು, ಲಸಿಕೆಯಿಂದ ಮಾತ್ರ ಅದನ್ನು ಸಂಪೂರ್ಣವಾಗಿ ತಡೆಗಟ್ಟಲು ಸಾಧ್ಯ. ಭಾರತ ಪೋಲಿಯೋ ಮುಕ್ತ ರಾಷ್ಟ್ರವಾಗಿದ್ದರೂ, ಪ್ರತಿಯೊಬ್ಬ ಪೋಷಕರು ತಮ್ಮ ಜವಾಬ್ದಾರಿಯನ್ನು ಅರಿತು ಮಕ್ಕಳಿಗೆ ತಪ್ಪದೆ ಲಸಿಕೆ ಹಾಕಿಸಬೇಕು ಎಂದು ಹೇಳಿದರು.

ಗದಗ ಭಾವಸಾರ ವ್ಹಿಜನ್ ಇಂಡಿಯಾ ಅಧ್ಯಕ್ಷ ಶ್ರೀಪಾದ ವೈಕುಂಠೆ ಮಾತನಾಡಿ, ಸಂಘಟನೆಯು ಆರಂಭದಿಂದಲೂ ಆರೋಗ್ಯ, ಶಿಕ್ಷಣ ಹಾಗೂ ಸಾಮಾಜಿಕ ಜಾಗೃತಿ ಕಾರ್ಯಕ್ರಮಗಳಿಗೆ ಬೆಂಬಲ ನೀಡುತ್ತ ಬಂದಿದೆ. ಮಕ್ಕಳ ಆರೋಗ್ಯ ರಕ್ಷಣೆಗೆ ಸಂಬಂಧಿಸಿದ ಪೋಲಿಯೋ ಲಸಿಕಾ ಅಭಿಯಾನಕ್ಕೂ ಸಂಪೂರ್ಣ ಸಹಕಾರ ನೀಡಲಾಗಿದ್ದು, ಸರ್ಕಾರದ ಆರೋಗ್ಯ ಕಾರ್ಯಕ್ರಮಗಳು ಯಶಸ್ವಿಯಾಗಲು ಸ್ವಯಂಸೇವಾ ಸಂಘಟನೆಗಳು ಹಾಗೂ ಸಾರ್ವಜನಿಕರ ಸಹಭಾಗಿತ್ವ ಅತ್ಯಗತ್ಯ ಎಂದು ತಿಳಿಸಿದರು.

ಕಾರ್ಯದರ್ಶಿ ಸುಧಾ ವೈಕುಂಠೆ ಸ್ವಾಗತಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಮರಿಯಮ್ಮ ಕಡೂರ, ಪವನಕುಮಾರ, ವೀರಣ್ಣ ಬೆಳಮಕರ, ರಾಜೇಂದ್ರ ತ್ರಿಮಲ್ಲೆ, ರಾಜೇಶ್ವರಿ ಸಣ್ಣಕ್ಕಿ, ವಿಜಯಾ ನವಲೆ, ಮಂಜುಳಾ ಜಾಧವ, ಡಾ. ದತ್ತಾತ್ರೇಯ ವೈಕುಂಠೆ, ಲಕ್ಷ್ಮೀ ಬೆಳಮಕರ, ಕಾವ್ಯಾ ದೊಡ್ಡಮನಿ, ರಾಘವೇಂದ್ರ ನವಲೆ, ಮಲ್ಲಮ್ಮ ಪಲ್ಲೇದ ಹಾಗೂ ಮಮತಾಜ್ ಧಾರವಾಡ ಸೇರಿದಂತೆ ಅನೇಕರು ಭಾಗವಹಿಸಿದ್ದರು.

> "ಪೋಲಿಯೋವನ್ನು ತಡೆಗಟ್ಟಲು ಲಸಿಕೆಯೇ ಅತ್ಯಂತ ಪರಿಣಾಮಕಾರಿ ಅಸ್ತ್ರ. ಪ್ರತಿಯೊಬ್ಬ ಪೋಷಕರೂ ತಮ್ಮ ಮಕ್ಕಳಿಗೆ ತಪ್ಪದೆ ಲಸಿಕೆ ಹಾಕಿಸಿ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು."
> –ಡಾ. ಸಂತೋಷ ಹುಯಿಲಗೋಳ

**170 ಮಕ್ಕಳಿಗೆ ಲಸಿಕೆ**

ನಗರದ ವೀರರಾಣಿ ಕಿತ್ತೂರ ಚೆನ್ನಮ್ಮ ಸರ್ಕಲ್ ಹಾಗೂ ಹುಯಿಲಗೋಳ ಆಸ್ಪತ್ರೆ ಸುತ್ತಮುತ್ತಲಿನ ಹಿಂದುಳಿದ ಪ್ರದೇಶಗಳ ಐದು ವರ್ಷದೊಳಗಿನ ಸುಮಾರು 170 ಮಕ್ಕಳಿಗೆ ಭಾನುವಾರ ಸಂಜೆಯವರೆಗೆ ಪೋಲಿಯೋ ಲಸಿಕೆ ನೀಡಲಾಯಿತು. ಆರೋಗ್ಯ ಸಿಬ್ಬಂದಿ ಹಾಗೂ ಸ್ವಯಂಸೇವಕರ ಸಹಕಾರದಿಂದ ಅಭಿಯಾನ ಯಶಸ್ವಿಯಾಗಿ ನಡೆಯಿತು.

## ಜು. 3ರಂದು ದಲಿತ ಜನಾಗ್ರಹ ಸಮಾವೇಶ

▸▸ಮೊದಲನೇ ಪುಟದಿಂದ

ವಿಶೇಷ ಘಟಕ ಯೋಜನೆಯಡಿ ಮೀಸಲಿರುವ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸುತ್ತಿರುವುದರಿಂದ ದಲಿತ ಸಮುದಾಯಕ್ಕೆ ದೊರೆಯಬೇಕಾದ ಸೌಲಭ್ಯಗಳು ವಂಚಿತವಾಗುತ್ತಿವೆ. ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿಯಲ್ಲಿ ಆಗುತ್ತಿರುವ ವಿಳಂಬದಿಂದ ದಲಿತ ಯುವಕರಿಗೆ ಸರ್ಕಾರಿ ಉದ್ಯೋಗದ ಅವಕಾಶಗಳು ಸಿಗುತ್ತಿಲ್ಲ. ಜೊತೆಗೆ ಭೂಒಡೆತನ ಯೋಜನೆಯನ್ನು ಪುನರಾರಂಭಿಸಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸಲು ಸಮಾವೇಶದ ಮೂಲಕ ಸರ್ಕಾರದ ಗಮನ ಸೆಳೆಯಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬಾಲರಾಜ ಅರಬರ, ಪ್ರೊ. ಸತೀಶ ಪಾಸಿ, ನಾಗರಾಜ ಹೂಗಾರ, ಮಲ್ಲಿಕಾರ್ಜುನ ಗೌಡಣ್ಣವರ, ನಾಗರಾಜ ಗೋಕಾವಿ, ಪೂಜಾ ಬೇವೂರ, ಹನುಮಂತ ಚಲವಾದಿ, ಚೇತನಾ ಸೀತಾಲಹರಿ, ಮುತ್ತಪ್ಪ ಭಜಂತ್ರಿ, ಮಂಜುನಾಥ ಮಾತಿನ ಹಾಗೂ ರಸೂಲಸಾಬ ತಹಸೀಲ್ದಾರ್ ಉಪಸ್ಥಿತರಿದ್ದರು.

## ಕುಮಾರಸ್ವಾಮಿ ವಿರುದ್ಧ ವೈಯಕ್ತಿಕ ಟೀಕೆ ನಿಲ್ಲಿಸಲಿ

▸▸ಮೊದಲನೇ ಪುಟದಿಂದ

ಮೀಸೆ ತಿರುವುವುದು, ಸೆಡ್ಡು ಹೊಡೆಯುವುದರಿಂದ ಯಾರೂ ಹೆದರುವುದಿಲ್ಲ. ಜೆಡಿಎಸ್ ಬಾಡಿಗೆ ಪಕ್ಷವಲ್ಲ ಎಂಬುದನ್ನು ಅರಿತುಕೊಳ್ಳಬೇಕು ಎಂದು ತಿರುಗೇಟು ನೀಡಿದರು.

ಗ್ಯಾರಂಟಿ ಯೋಜನೆಗಳ ಕುರಿತು ಮಾತನಾಡಿದ ಅವರು, ಗ್ಯಾರಂಟಿ ಸಮಿತಿ ಸದಸ್ಯರು ಸಚಿವರಂತೆ ಅಧಿಕಾರಿಗಳ ಸಭೆ ನಡೆಸುವುದಕ್ಕಿಂತ ಯೋಜನೆಗಳ ಸಮರ್ಪಕ ಅನುಷ್ಠಾನದತ್ತ ಗಮನ ಹರಿಸಬೇಕು. ಸತ್ತವರ ಹೆಸರಿನಲ್ಲಿ ಹಾಗೂ ಖಾತೆಯೇ ಇಲ್ಲದವರ ಹೆಸರಿನಲ್ಲಿ ಹಣ ಜಮೆಯಾಗಿರುವುದಾಗಿ ಸರ್ಕಾರವೇ ಹೇಳುತ್ತಿದೆ. ಹೀಗಿದ್ದರೂ ಗ್ಯಾರಂಟಿ ಸಮಿತಿ ವಿಫಲವಾಗಿದ್ದು, ಅದನ್ನು ವಿಸರ್ಜಿಸಬೇಕು ಎಂದು ಒತ್ತಾಯಿಸಿದರು. ಗೃಹಲಕ್ಷ್ಮಿ ಯೋಜನೆಯ ಹಣವನ್ನು ತೆರಿಗೆ ಪಾವತಿಸುವ ಮಹಿಳೆಯರಿಗೆ ನೀಡದಿರುವ ನಿರ್ಧಾರ ಸರಿಯಲ್ಲ. ಚುನಾವಣೆಗೂ ಮುನ್ನ ನೀಡಿದ ಭರವಸೆಯಂತೆ ಸರ್ಕಾರ ನಡೆದುಕೊಳ್ಳಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಸುದ್ದಿಗೋಷ್ಠಿಯಲ್ಲಿ ಅಮರೇಶ ಅಂಗಡಿ, ಬಸವರಾಜ ಅಪ್ಪಣ್ಣವರ, ಪ್ರಫುಲ್ ಪುಣೇಕರ್ ಹಾಗೂ ಜಿ.ಕೆ. ಕೊಳ್ಳಿಮಠ ಉಪಸ್ಥಿತರಿದ್ದರು.

### ನರೇಗಾ ಸ್ಥಾನಕ್ಕೆ ಹೊಸ ಯೋಜನೆ: ಗದಗ ಜಿಲ್ಲೆಯಲ್ಲಿ ಅನುಷ್ಠಾನಕ್ಕೆ ಸಿಬ್ಬಂದಿಗೆ ತರಬೇತಿ

# ನಾಳೆಯಿಂದ 'ವಿಬಿ-ಜಿ ರಾಮ್ (ಜಿ)' ಯೋಜನೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣ ಉದ್ಯೋಗ ಭದ್ರತೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ರೂಪಿಸಿರುವ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್‌ಗಾರ್ ಆ್ಯಂಡ್ ಅಜೀವಿಕ ಮಿಷನ್ (ಗ್ರಾಮೀಣ) – ವಿಬಿ-ಜಿ ರಾಮ್ (ಜಿ) ಯೋಜನೆ ಜುಲೈ 1ರಿಂದ ದೇಶಾದ್ಯಂತ ಜಾರಿಗೆ ಬರಲಿದ್ದು, ಗದಗ ಜಿಲ್ಲೆಯಲ್ಲಿಯೂ ಯೋಜನೆ ಅನುಷ್ಠಾನಕ್ಕೆ ಸಿದ್ಧತೆಗಳು ಆರಂಭಗೊಂಡಿವೆ.

ಈ ಹಿನ್ನೆಲೆಯಲ್ಲಿ ಸೋಮವಾರ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ವಿವಿಧ ಹಂತದ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ತರಬೇತಿ ಕಾರ್ಯಾಗಾರ ನಡೆಯಿತು. ರಾಜ್ಯ ಆಯುಕ್ತಾಲಯದಿಂದ ತರಬೇತಿ ಪಡೆದ ಮಾಸ್ಟರ್ ಟ್ರೈನರ್‌ಗಳಾದ ಸಂತೋಷ ಪಾಟೀಲ ಹಾಗೂ ಚಂದ್ರು ಲಮಾಣಿ ಅವರು ಜಿಲ್ಲಾ ಪಂಚಾಯಿತಿಯ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ ಅವರ ನೇತೃತ್ವದಲ್ಲಿ ತರಬೇತಿ ನೀಡಿದರು.

ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಸಿ.ಆರ್. ಮುಂಡರಗಿ, ಯೋಜನೆಯನ್ನು ಜಿಲ್ಲೆಯಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದೆ. ಗ್ರಾಮೀಣ ಅಕುಶಲ ಕಾರ್ಮಿಕರಿಗೆ ಉದ್ಯೋಗ ಕಲ್ಪಿಸುವುದರ ಜೊತೆಗೆ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಈ ಯೋಜನೆ ನೆರವಾಗಲಿದೆ ಎಂದು ತಿಳಿಸಿದರು.



ಮಾಸ್ಟರ್ ಟ್ರೈನರ್ ಚಂದ್ರು ಲಮಾಣಿ ಮಾತನಾಡಿ, ಯೋಜನೆಯಡಿ ಅಕುಶಲ ಕೆಲಸಕ್ಕಾಗಿ ಬೇಡಿಕೆ ಸಲ್ಲಿಸುವ ಗ್ರಾಮೀಣ ಕುಟುಂಬಗಳ ವಯಸ್ಕ ಸದಸ್ಯರಿಗೆ ಒಂದು ಆರ್ಥಿಕ ವರ್ಷದಲ್ಲಿ 125 ದಿನಗಳ ಕಡ್ಡಾಯ ಉದ್ಯೋಗ ಖಾತ್ರಿ ನೀಡಲಾಗುತ್ತದೆ. ವಿಕಸಿತ ಗ್ರಾಮ ಪಂಚಾಯಿತಿ ಯೋಜನೆ (ಗಿಉಕಕ) ಮೂಲಕ ಸ್ಥಳೀಯ ಅಗತ್ಯಗಳಿಗೆ ಅನುಗುಣವಾಗಿ ಕಾಮಗಾರಿಗಳನ್ನು ಆಯ್ಕೆ ಮಾಡಿ ಅನುಷ್ಠಾನಗೊಳಿಸಲಾಗುವುದು. ಕುಟುಂಬಗಳ ನೋಂದಣಿ, ಉದ್ಯೋಗ ಅರ್ಜಿ ಸ್ವೀಕಾರ, ಕಾಮಗಾರಿ ನಿರ್ವಹಣೆ ಹಾಗೂ ದಾಖಲೆಗಳ ಸಂರಕ್ಷಣೆ ಸೇರಿದಂತೆ ಪ್ರಮುಖ ಜವಾಬ್ದಾರಿಗಳನ್ನು ಗ್ರಾಮ ಪಂಚಾಯಿತಿಗಳಿಗೆ ವಹಿಸಲಾಗಿದೆ ಎಂದು ವಿವರಿಸಿದರು.

ನರಗುಂದ ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ (ಗ್ರಾ.ಉ.) ಹಾಗೂ ಮಾಸ್ಟರ್ ಟ್ರೈನರ್ ಸಂತೋಷ ಪಾಟೀಲ ಮಾತನಾಡಿ, ಜಲ ಭದ್ರತೆ, ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ, ಜೀವನೋಪಾಯ ವೃದ್ಧಿ ಹಾಗೂ ಹವಾಮಾನ ವೈಪರೀತ್ಯ ಶಮನ ಕಾಮಗಾರಿಗಳಿಗೆ ಯೋಜನೆಯಲ್ಲಿ ಆದ್ಯತೆ ನೀಡಲಾಗಿದೆ. ಸಮಗ್ರ ಡಿಜಿಟಲ್ ವ್ಯವಸ್ಥೆಯ ಮೂಲಕ ಆಡಳಿತದಲ್ಲಿ ಪಾರದರ್ಶಕತೆ, ಹೊಣೆಗಾರಿಕೆ ಹಾಗೂ ನಾಗರಿಕರ ಪಾಲ್ಗೊಳ್ಳುವಿಕೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶವನ್ನು ಯೋಜನೆ ಹೊಂದಿದೆ ಎಂದು ಹೇಳಿದರು.

> "ವಿಬಿ-ಜಿ ರಾಮ್ (ಜಿ) ಯೋಜನೆಯು ಗ್ರಾಮೀಣ ಉದ್ಯೋಗ ಭದ್ರತೆಯನ್ನು ಬಲಪಡಿಸುವುದರೊಂದಿಗೆ ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಹೊಸ ಅವಕಾಶಗಳನ್ನು ಕಲ್ಪಿಸಲಿದೆ."
>
> – **ಸಿ.ಆರ್. ಮುಂಡರಗಿ,** ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ

2047ರೊಳಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ರೂಪಿಸುವ 'ವಿಕಸಿತ ಭಾರತ @2047' ಗುರಿ ಸಾಧನೆಗೆ ಈ ಯೋಜನೆ ಮಹತ್ವದ ಹೆಜ್ಜೆಯಾಗಲಿದ್ದು, ಗ್ರಾಮೀಣ ಉದ್ಯೋಗ ಭದ್ರತೆ ಹಾಗೂ ಜೀವನೋಪಾಯ ವೃದ್ಧಿಗೆ ಹೊಸ ದಿಕ್ಕು ನೀಡಲಿದೆ ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ಮುಂಡರಗಿ, ರೋಣ, ಗಜೇಂದ್ರಗಡ ಹಾಗೂ ನರಗುಂದ ತಾಲೂಕಿನ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗಣಕಯಂತ್ರ ನಿರ್ವಾಹಕರು, ಬಿಎಫ್‌ಟಿ, ಜಿಕೆಎಂ, ತಾಲೂಕು ಪಂಚಾಯಿತಿ ನರೇಗಾ ಸಿಬ್ಬಂದಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಸಹಕಾರ ಸಂಘಗಳ ನೋಂದಣಿ ರದ್ದು ಪ್ರಕ್ರಿಯೆ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನ ಹಲವು ಸಹಕಾರ ಸಂಘಗಳು ತಮ್ಮ ಬೈಲಾದ ಉದ್ದೇಶಗಳಿಗೆ ಅನುಗುಣವಾಗಿ ಕಾರ್ಯನಿರ್ವಹಿಸದೆ ಹಲವು ವರ್ಷಗಳಿಂದ ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ ಅವುಗಳನ್ನು ಸಮಾಪನೆಗೊಳಿಸುವ ಪ್ರಕ್ರಿಯೆ ಆರಂಭಿಸಲಾಗಿದೆ.

ಈ ಸಂಬಂಧ ಸಹಕಾರ ಸಂಘಗಳ ಉಪನಿಬಂಧಕರು ಸಮಾಪನಾ ಆದೇಶ ಹೊರಡಿಸಿ ಸಮಾಪನಾಧಿಕಾರಿಯನ್ನು ನೇಮಕ ಮಾಡಿದ್ದು, ಸಮಾಪನೆಗೊಂಡಿರುವ ಸಂಘಗಳು ತಮ್ಮ ನೋಂದಾಯಿತ ವಿಳಾಸಗಳಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಅಲ್ಲದೆ, ಅವುಗಳ ಆಡಳಿತ ಮಂಡಳಿ ಸದಸ್ಯರು ಹಾಗೂ ಮುಖ್ಯ ಕಾರ್ಯನಿರ್ವಾಹಕರ (ಕಾರ್ಯದರ್ಶಿ) ಕುರಿತು ಯಾವುದೇ ಮಾಹಿತಿ ಲಭ್ಯವಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಸಮಾಪನೆ ಪ್ರಕ್ರಿಯೆಗೆ ಒಳಪಟ್ಟಿರುವ ಸಂಘಗಳಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಅಡವಿಸೋಮಾಪುರ, ನೋಬಲ್ ಜನಾಭಿವೃದ್ಧಿ ಕೋ-ಆಪ್ ಕ್ರೆಡಿಟ್ ಸೊಸೈಟಿ, ಕಟ್ಟಡ ನಿರ್ಮಾಣ ಕಾರ್ಮಿಕರ ಪತ್ತಿನ ಸಹಕಾರ ಸಂಘ, ಗ್ರೂಪ್ ವಡ್ಡರ ಕೂಲಿಕಾರರ ಸಹಕಾರ ಸಂಘ, ಚಿಂಚಲಿ, ಜರ್ನಲಿಸ್ಟ್ ಎಂಪ್ಲಾಯೀಸ್ ವಿವಿಧೋದ್ದೇಶಗಳ ಸಹಕಾರ ಸಂಘ, ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ, ಲಕ್ಕುಂಡಿ, ನೆಹರು ಗೃಹ ನಿರ್ಮಾಣ ಸಹಕಾರ ಸಂಘ, ನೆಹರು ಕೋ-ಆಪ್ ಕ್ರೆಡಿಟ್ ಸೊಸೈಟಿ, ಯಂಗ್ ಇಂಡಿಯಾ ಕೋ-ಆಪ್ ಕ್ರೆಡಿಟ್ ಸೊಸೈಟಿ, ಉಜ್ವಲ ಖಾದಿ ಗ್ರಾಮೋದ್ಯೋಗ ಕೈಗಾರಿಕಾ ಉತ್ಪಾದಕರ ಸಹಕಾರ ಸಂಘ, ಮುಳಗುಂದ, ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ, ಹುಯಿಲಗೋಳ, ಗ್ರಾಜುವೇಟ್ಸ್ ಸೆಲ್ಫ್ ಎಂಪ್ಲಾಯ್‌ಮೆಂಟ್ ಅಂಡ್ ಸರ್ವಿಸಸ್ ಕೋ-ಆಪ್ ಸೊಸೈಟಿ, ಲೆದರ್ ಟ್ಯಾನರ್ ಕೋ-ಆಪ್ ಸೊಸೈಟಿ, ಲಂಬಾಣಿ ಮಹಿಳಾ ವಿವಿಧೋದ್ದೇಶಗಳ ಕೈಗಾರಿಕಾ ಉತ್ಪಾದಕರ ಸಹಕಾರ ಸಂಘ, ಪಾಪನಾಶಿ, ಗದಗ ತಾಲೂಕು ಮಟ್ಟದ ಆರ್ಟಿಸನ್ ಮಲ್ಟಿಪರ್ಪಸ್ ಕೋ-ಆಪ್ ಸೊಸೈಟಿ, ಹಾಲು ಉತ್ಪಾದಕರ ಸಹಕಾರ ಸಂಘ, ಚಿಂಚಲಿ, ಕಸ್ತೂರಬಾ ಮಹಿಳಾ ವಿವಿಧೋದ್ದೇಶಗಳ ಸಹಕಾರ ಸಂಘ, ಶ್ರೀ ಬೂದೇಶ್ವರ ಕುರಿ ಮತ್ತು ಉಣ್ಣೆ ಮಾರಾಟ ಸಂಸ್ಕರಣ ಸಹಕಾರ ಸಂಘ, ಹೊಸಳ್ಳಿ, ಅಲ್ ಇತ್ತಿಹಾದ್ ಕೋ-ಆಪ್ ಕ್ರೆಡಿಟ್ ಸೊಸೈಟಿ, ಶ್ರೀದೇವಿ ಕ್ರೆಡಿಟ್ ಕೋ-ಆಪ್ ಸೊಸೈಟಿ ಹಾಗೂ ಶ್ರೀಕೃಷ್ಣ ಕೈಮಗ್ಗ ಮತ್ತು ಪೀಠೋಪಕರಣ ತಯಾರಕರ ಕೈಗಾರಿಕಾ ಸಹಕಾರ ಸಂಘ ಸೇರಿವೆ.

ಈ ಸಹಕಾರ ಸಂಘಗಳಿಗೆ ಯಾವುದೇ ವ್ಯಕ್ತಿಗಳಿಂದ ಪಡೆಯಬೇಕಾದ ಅಥವಾ ವ್ಯಕ್ತಿಗಳಿಗೆ ನೀಡಬೇಕಾದ ಬಾಕಿ ವ್ಯವಹಾರಗಳಿದ್ದರೆ, ಸಂಬಂಧಪಟ್ಟ ದಾಖಲೆಗಳೊಂದಿಗೆ ಪ್ರಕಟಣೆ ಹೊರಡಿಸಿದ ಏಳು ದಿನಗಳೊಳಗೆ ಸಹಕಾರ ಸಂಘಗಳ ನಿರೀಕ್ಷಕರು, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ, ಗದಗ ಉಪವಿಭಾಗವನ್ನು ಸಂಪರ್ಕಿಸಿ ಆಕ್ಷೇಪಣೆ ಸಲ್ಲಿಸಬಹುದು.

ನಿಗದಿತ ಅವಧಿಯಲ್ಲಿ ಯಾವುದೇ ಆಕ್ಷೇಪಣೆ ಸಲ್ಲಿಕೆಯಾಗದಿದ್ದರೆ, ಆಕ್ಷೇಪಣೆಗಳಿಲ್ಲವೆಂದು ಪರಿಗಣಿಸಿ ಸಂಬಂಧಿಸಿದ ಸಹಕಾರ ಸಂಘಗಳ ದಾಖಲೆಗಳನ್ನು ನಿಯಮಾನುಸಾರ ಶೂನ್ಯಗೊಳಿಸಿ ನೋಂದಣಿ ರದ್ದುಪಡಿಸುವ ಕ್ರಮ ಕೈಗೊಳ್ಳಲಾಗುವುದು. ನಂತರ ಸಲ್ಲಿಕೆಯಾಗುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸಮಾಪನಾಧಿಕಾರಿ ಹಾಗೂ ಸಹಕಾರ ಸಂಘಗಳ ನಿರೀಕ್ಷಕ ಬಿ.ಆರ್. ನಿಡಗುಂದಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಕ್ಷೇಪಣೆ ಸಲ್ಲಿಸಲು ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಿನಲ್ಲಿರುವ ಹಲವು ಸಹಕಾರ ಸಂಘಗಳು ತಮ್ಮ ಬೈಲಾದ ಉದ್ದೇಶಗಳಿಗೆ ಅನುಗುಣವಾಗಿ ಕಾರ್ಯನಿರ್ವಹಿಸದೆ ಹಲವು ವರ್ಷಗಳಿಂದ ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ ಅವುಗಳನ್ನು ಸಮಾಪನೆಗೊಳಿಸುವ ಪ್ರಕ್ರಿಯೆ ಆರಂಭಿಸಲಾಗಿದೆ.

ಈ ಸಂಬಂಧ ಮಾನ್ಯ ಸಹಕಾರ ಸಂಘಗಳ ಉಪನಿಬಂಧಕರು ಸಮಾಪನಾ ಆದೇಶ ಹೊರಡಿಸಿ, ಸಮಾಪನಾಧಿಕಾರಿಯನ್ನು ನೇಮಕ ಮಾಡಿದ್ದಾರೆ.

ಸಮಾಪನೆಗೊಂಡಿರುವ ಸಂಘಗಳು ತಮ್ಮ ನೋಂದಾಯಿತ ವಿಳಾಸಗಳಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಅಲ್ಲದೆ, ಅವುಗಳ ಆಡಳಿತ ಮಂಡಳಿ ಸದಸ್ಯರು ಹಾಗೂ ಮುಖ್ಯ ಕಾರ್ಯನಿರ್ವಾಹಕರ (ಕಾರ್ಯದರ್ಶಿ) ಕುರಿತು ಯಾವುದೇ ಮಾಹಿತಿ ಲಭ್ಯವಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

**ಸಮಾಪನೆ ಪ್ರಕ್ರಿಯೆಗೆ ಒಳಪಟ್ಟಿರುವ ಸಂಘಗಳು**

- ಬಾಷೇಲ್ ಮಿಷನ್ ಕ್ರಿಶ್ಚಿಯನ್ ಕೋ-ಆಪ್ ಕ್ರೆಡಿಟ್ ಸೊಸೈಟಿ ನಿ., ಬೆಟಗೇರಿ-ಗದಗ
- ವಿಜಯಲಕ್ಷ್ಮೀ ಮಹಿಳಾ ವಿವಿಧೋ ದ್ದೇಶಗಳ ಸಹಕಾರ ಸಂಘ ನಿ., ಹರ್ತಿ (ತಾ. ಗದಗ)
- ಭಾರತ ಕೋ-ಆಪ್ ಕ್ರೆಡಿಟ್ ಸೊಸೈಟಿ ನಿ., ಶಿರಹಟ್ಟಿ
- ಉಂಡೇನಹಳ್ಳಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ., ಉಂಡೇನಹಳ್ಳಿ (ತಾ. ಲಕ್ಷ್ಮೇಶ್ವರ)
- ಅಕ್ಕಿಗುಂದ ಹಾಲು ಉತ್ಪಾದಕರ ಸಹಕಾರ ಸಂಘ ನಿ., ಅಕ್ಕಿಗುಂದ (ತಾ. ಲಕ್ಷ್ಮೇಶ್ವರ)

ಈ ಸಹಕಾರ ಸಂಘಗಳಿಗೆ ಯಾವುದೇ ವ್ಯಕ್ತಿಗಳಿಂದ ಪಡೆಯಬೇಕಾದ ಅಥವಾ ವ್ಯಕ್ತಿಗಳಿಗೆ ಕೊಡಬೇಕಾದ ಬಾಕಿ ಮೊತ್ತಗಳಿದ್ದರೆ ಸಂಬಂಧಪಟ್ಟವರು ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ, ಗದಗ ಉಪವಿಭಾಗವನ್ನು ಸಂಪರ್ಕಿಸಿ ತಮ್ಮ ಆಕ್ಷೇಪಣೆ ಅಥವಾ ಹಕ್ಕುಗಳನ್ನು ಸಲ್ಲಿಸಬಹುದು.

ನಿಗದಿತ ಅವಧಿಯಲ್ಲಿ ಯಾವುದೇ ಆಕ್ಷೇಪಣೆಗಳು ಸಲ್ಲಿಕೆಯಾಗದಿದ್ದಲ್ಲಿ, ಆಕ್ಷೇಪಣೆಗಳಿಲ್ಲವೆಂದು ಪರಿಗಣಿಸಿ ಸಮಾಪನೆಗೊಂಡ ಸಹಕಾರ ಸಂಘಗಳ ಆಸ್ತಿಪಾಸ್ತಿಗಳ ವಿವರಗಳನ್ನು ನಿಯಮಾನುಸಾರ ಶೂನ್ಯಗೊಳಿಸಿ, ನೋಂದಣಿ ರದ್ದುಗೊಳಿಸುವ ಕ್ರಮ ಕೈಗೊಳ್ಳಲಾಗುವುದು ಎಂದು ಸಮಾಪನಾಧಿಕಾರಿ ಹಾಗೂ ಮಾರಾಟಾಧಿಕಾರಿ ಬಿ.ಆರ್. ನಿಡಗುಂದಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರಿ ಹರಿದ ಸಂಭ್ರಮಕ್ಕೆ ಮಳೆರಾಯನ ಸಾಥ್..!

▸▸ಮೊದಲನೇ ಪುಟದಿಂದ

ಬಿಳಿ ಎತ್ತು ಕರಿ ಹರಿದರೆ ಹಿಂಗಾರು ಉತ್ತಮ, ಕರಿ ಎತ್ತು ಕರಿ ಹರಿದರೆ ಮುಂಗಾರು ಉತ್ತಮವಾಗಲಿದೆ ಎಂಬ ನಂಬಿಕೆ ರೈತರಲ್ಲಿದೆ.

ಪಟ್ಟಣದ ದೇಸಾಯಿಬಣ, ಹುಲಗೇರಿ ಬಣ, ಪೇಠಬಣ ಹಾಗೂ ಹಿರೇಬಣ ಅಗಸಿ ಬಾಗಿಲುಗಳಲ್ಲಿ ಕರಿ ಹರಿಯುವ ಸಂಪ್ರದಾಯ ನೆರವೇರಿತು. ರೈತರು ತಮ್ಮ ಎತ್ತುಗಳ ಮೈಮೇಲೆ "ರಾಮಧೂತ", "ಭೂಮಿತಾಯಿ ಚೊಚ್ಚಲ ಮಗ", "ಪುಣ್ಯಕೋಟಿ", "ಮನೆದೇವ್ರು", "ರಾಜಕುಮಾರ", "ಒಡಹುಟ್ಟಿದವರು", "ಮುಂಗಾರು ಮಳೆ", "ನಮ್ಮ ಬಸವ" ಮೊದಲಾದ ಬರಹಗಳನ್ನು ಬರೆದು ಪ್ರೀತಿ ವ್ಯಕ್ತಪಡಿಸಿದರು.

ಬಳಿಕ ಪಟ್ಟಣದ ಆರಾಧ್ಯದೈವ ಸೋಮೇಶ್ವರ ದೇವಸ್ಥಾನದ ಸನ್ನಿಧಿಯಲ್ಲಿ ಗಿರೀಶ ಅಣ್ಣಿಗೇರಿಯವರ ಎತ್ತುಗಳು ಕರಿ ಹರಿದವು. ಎತ್ತುಗಳ ಓಟವನ್ನು ಕಣ್ತುಂಬಿಕೊಳ್ಳಲು ಸಾವಿರಾರು ರೈತರು, ಯುವಕರು ಹಾಗೂ ಮಕ್ಕಳು ಸೇರಿದ್ದರು. ನಂತರ ಕರಿ ಹರಿದ ಎತ್ತುಗಳೊಂದಿಗೆ ನೂರಾರು ಎತ್ತುಗಳ ಭವ್ಯ ಮೆರವಣಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ವಾದ್ಯ ವೈಭವದೊಂದಿಗೆ ನಡೆಯಿತು. ಇದೇ ವೇಳೆ ಸುರಿದ ಮಳೆ ಹಬ್ಬದ ಸಂಭ್ರಮವನ್ನು ಮತ್ತಷ್ಟು ಇಮ್ಮಡಿಗೊಳಿಸಿತು.

ಈ ಸಂದರ್ಭದಲ್ಲಿ ಗುರುರಾಜ ಪಾಟೀಲಕುಲಕರ್ಣಿ, ಚನ್ನಪ್ಪ ಜಗಲಿ, ಶಿವಯೋಗಿ ಅಂಕಲಕೋಟಿ, ಚಂದ್ರಣ್ಣ ಮೆಕ್ಕಿ, ಚನ್ನಪ್ಪ ಚಿಂಚಲಿ, ಬಸವರಾಜ ಮೆಣಸಿನಕಾಯಿ, ವಿರುಪಾಕ್ಷ ಆದಿ, ಅಪ್ಪಣ್ಣ ಮುಳಗುಂದ, ಮಯೂರಗೌಡ ಪಾಟೀಲ, ನಂದೀಶ ಬಂಡಿವಾಡ, ರಾಮಣ್ಣ ಗೌರಿ, ಸೋಮಣ್ಣ ಸುತಾರ, ಸುರೇಶ ಚೌಕನವರ, ಸೋಮಣ್ಣ ಉಮಚಗಿ, ಸುರೇಶ ರಾಚನಾಯ್ಕರ, ಮುತ್ತಣ್ಣ ಕಟ್ಟಿಗೌಡ್ರ, ಗಂಗಪ್ಪ ಮೇವುಂಡಿ, ಈರಪ್ಪ ಗುಡಗೇರಿ, ಬಸವರಾಜ ಅಣ್ಣಿಗೇರಿ, ಬಸವರಾಜ ಆದಿ, ರಮೇಶ ಹೆಬ್ಬಾಳ ಸೇರಿದಂತೆ ರೈತ ಮುಖಂಡರು ಉಪಸ್ಥಿತರಿದ್ದರು.

## ಪುಣ್ಯಾಶ್ರಮ ವಿವಾದಕ್ಕೆ ಹೊಸ ತಿರುವು..!

▸▸ಮೊದಲನೇ ಪುಟದಿಂದ

ಆದರೆ ಈ ಸಂಪನ್ಮೂಲಗಳ ಬಳಕೆ ಕುರಿತು ಪಾರದರ್ಶಕತೆ ಇರಬೇಕೆಂಬುದು ಭಕ್ತರ ಆಶಯವಾಗಿದೆ. ಈ ಹಿನ್ನೆಲೆಯಲ್ಲಿ ಆಶ್ರಮದ ಆಡಳಿತ, ಹಣಕಾಸು ವ್ಯವಹಾರಗಳು ಹಾಗೂ ಆಸ್ತಿ ನಿರ್ವಹಣೆ ಕುರಿತು ನಿವೃತ್ತ ಜಿಲ್ಲಾ ನ್ಯಾಯಾಧೀಶರ ನೇತೃತ್ವದಲ್ಲಿ ಸಮಗ್ರ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಆಶ್ರಮಕ್ಕೆ ಸಂಬಂಧವಿಲ್ಲದ ವ್ಯಕ್ತಿಗಳು ಆಡಳಿತದಲ್ಲಿ ಹಸ್ತಕ್ಷೇಪ ಮಾಡುತ್ತಿದ್ದಾರೆ ಎಂದು ಆರೋಪಿಸಿದ ಅವರು, ಈ ಕುರಿತು ಸರ್ಕಾರ ಮಧ್ಯಪ್ರವೇಶಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು. ರಥದ ಗಾಲಿಗಳ ಮೇಲೆ ದೇಣಿಗೆದಾರರ ಹೆಸರನ್ನು ಕೆತ್ತಿಸಿರುವ ವಿಚಾರವೂ ಭಕ್ತರಲ್ಲಿ ಅಸಮಾಧಾನಕ್ಕೆ ಕಾರಣವಾಗಿದ್ದು, ಅದನ್ನು ಪರಿಶೀಲಿಸಬೇಕು ಎಂದು ಆಗ್ರಹಿಸಿದರು.

ಆಶ್ರಮದಲ್ಲಿ ಉಂಟಾಗಿರುವ ಗೊಂದಲ ನಿವಾರಣೆಗೆ ಸರ್ಕಾರ ತಕ್ಷಣ ಆಡಳಿತಾಧಿಕಾರಿಯನ್ನು ನೇಮಿಸಿ, ಆಶ್ರಮದ ಮೂಲ ಉದ್ದೇಶಗಳಾದ ಶಿಕ್ಷಣ, ಸಂಗೀತ ಸೇವೆ ಹಾಗೂ ಅನ್ನದಾಸೋಹಕ್ಕೆ ಯಾವುದೇ ಧಕ್ಕೆಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಮನವಿ ಸ್ವೀಕರಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ವಿಷಯವನ್ನು ಪರಿಶೀಲಿಸಿ ನಿಯಮಾನುಸಾರ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಹೇಶ ರೋಖಡೆ, ಅರುಣ್ ಬಾವಿ, ಶಿವಯೋಗಿ ಹಿರೇಮಠ, ಮಹಾಬಲೇಶ್ವರ ಶೆಟ್ಟರ್, ಪಿ.ಎಸ್. ಕಾಳೆ, ಸತೀಶ್ ಕುಂಬಾರ, ಅಶೋಕ್ ಬಜಂತ್ರಿ, ವೆಂಕಟೇಶ್ ದೊಡ್ಡಮನಿ, ಕುಮಾರ್ ನಡಗೇರಿ, ಕುಮಾರ ಮಿಟ್ಟಿಮಠ, ಈರಪ್ಪ ಹೆಬಸೂರು, ಈರಣ್ಣ ಪೂಜಾರ, ಭರತ ಲದ್ದಿ, ಸಿದ್ದಪ್ಪ ಯಳವತ್ತಿ, ಪ್ರವೀಣ್ ಕರಬಷ್ಟಿ, ಬಸನಗೌಡ ಪೊಲೀಸ್ ಪಾಟೀಲ್, ಹುಲುಗಪ್ಪ ವಾಲ್ಮೀಕಿ, ಸದಾನಂದ್ ಸಿಂಗ್ ಗುರ್ಲಸೂರ್, ಈರಣ್ಣ ಗಾಣಿಗೇರ, ದತ್ತು ವಿಠ್ಠಲಕರ, ಸಂಜು ಚಟ್ಟಿ, ವಿಶಾಲ್ ಗೋಕಾವಿ ಹಾಗೂ ವಿಶ್ವನಾಥ್ ಸಿರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಎತ್ತುಗಳಿಗೆ ಪೂಜೆ... ಸಮೃದ್ಧ ಫಸಲಿಗೆ ರೈತರ ಪ್ರಾರ್ಥನೆ..!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಾರ ಹುಣ್ಣಿಮೆಯ ಮುನ್ನಾದಿನ ಭಾನುವಾರ ಪಟ್ಟಣ ಹಾಗೂ ಸುತ್ತಮುತ್ತಲಿನ ರೈತ ಕುಟುಂಬಗಳು ಸಂಪ್ರದಾಯಬದ್ಧವಾಗಿ ಹೊನ್ನುಗ್ಗಿ ಹಬ್ಬ ಆಚರಿಸಿ, ಕೃಷಿಯ ಜೀವನಾಡಿಯಾದ ಎತ್ತುಗಳಿಗೆ ವಿಶೇಷ ಪೂಜೆ ಸಲ್ಲಿಸಿದರು.

ಹಬ್ಬದ ಅಂಗವಾಗಿ ರೈತರು ಮನೆಯೊಳಗೆ ಎತ್ತುಗಳ ಮುಂಗಾಲುಗಳನ್ನು ಕರಿ ಕಂಬಳಿಯ ಮೇಲೆ ನಿಲ್ಲಿಸಿ, ಬಂಗಾರವನ್ನು ಎತ್ತಿನ ಕಾಲುಗಳಿಗೆ ಮುಟ್ಟಿಸಿ ಪೂಜೆ ನೆರವೇರಿಸಿದರು. ಬಳಿಕ ಎತ್ತುಗಳ ಕೊಂಬುಗಳಿಗೆ ಚಕ್ಕುಲಿ ಹಾಗೂ ಕೊಡಬಳೆಗಳ ಸರಗಳನ್ನು ಕಟ್ಟಿ ಅಲಂಕರಿಸಿ,



ಮುತ್ತೈದೆಯರಿಂದ ಆರತಿ ಮಾಡಿಸಿ ಆಶೀರ್ವಾದ ಪಡೆದರು.

ವರ್ಷವಿಡೀ 'ಹೊನ್ನುಗ್ಗಿ (ಬಂಗಾರ + ಹುಗ್ಗಿ)ಯಂತೆ ಫಸಲು ಸಮೃದ್ಧಿಯಾಗಿ ಬೆಳೆಯಲಿ, ರೈತರ ಬದುಕು ಹಸನಾಗಿರಲಿ' ಎಂಬ ಆಶಯದೊಂದಿಗೆ ಪ್ರಾರ್ಥನೆ ಸಲ್ಲಿಸಲಾಯಿತು.

ಪೂಜೆಯ ಬಳಿಕ ಮನೆಯಲ್ಲಿದ್ದ ಎತ್ತು-ಹಸುಗಳಿಗೆ ಅಕ್ಕಿ ಹುಗ್ಗಿ ಹಾಗೂ ಜೋಳದ ಕಿಚಡಿಯನ್ನು ಪ್ರಸಾದವಾಗಿ ನೀಡಲಾಯಿತು. ಇದೇ ಪ್ರಸಾದವನ್ನು ನೆರೆಹೊರೆಯವರು, ಬಂಧು-ಬಳಗ ಹಾಗೂ ಗ್ರಾಮಸ್ಥರೊಂದಿಗೆ ಹಂಚಿಕೊಂಡು ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು.

ರೈತರು ಮತ್ತು ಜಾನುವಾರುಗಳ ನಡುವಿನ ಅವಿನಾಭಾವ ಸಂಬಂಧವನ್ನು ಪ್ರತಿಬಿಂಬಿಸುವ ಹೊನ್ನುಗ್ಗಿ ಹಬ್ಬ ಉತ್ತರ ಕರ್ನಾಟಕದ ಗ್ರಾಮೀಣ ಭಾಗದಲ್ಲಿ ಇಂದಿಗೂ ಸಂಪ್ರದಾಯಬದ್ಧವಾಗಿ ಆಚರಿಸಲ್ಪಡುತ್ತಿದ್ದು, ಕೃಷಿ ಸಂಸ್ಕೃತಿಯ ಜೀವಂತ ಪರಂಪರೆಯಾಗಿ ಉಳಿದಿದೆ.

## ಶಿಕ್ಷಣ ಭೀಷ್ಮ ಡಾ. ಬಿ.ಎಫ್. ದಂಡಿನ ಅವರಿಗೆ ಅಂತಿಮ ನಮನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ, ಉತ್ತರ ಕರ್ನಾಟಕದ ಶಿಕ್ಷಣ ಭೀಷ್ಮ ಹಾಗೂ ಕರ್ನಾಟಕ ವಿಶ್ವವಿದ್ಯಾಲಯದ ಗೌರವ ಡಾ-ಕ್ಟರೇಟ್ ಪುರಸ್ಕೃತ ಡಾ. ಬಿ.ಎಫ್. ದಂಡಿನ ಅವರ ಅಂತ್ಯಕ್ರಿಯೆ ಭಾನುವಾರ ನಗರದ ರಾಜೀವಗಾಂಧಿ ನಗರದ ಕೆಎಸ್‌ಎಸ್ ಕಾಲೇಜು ಆವರಣದಲ್ಲಿ ನೆರವೇರಿತು.

1965ರಲ್ಲಿ ಕನಕದಾಸ ಶಿಕ್ಷಣ ಸಮಿತಿಯನ್ನು ಸ್ಥಾಪಿಸಿ, ಸಂಸ್ಥಾಪಕ ಅಧ್ಯಕ್ಷರಾಗಿ 65ಕ್ಕೂ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಕಟ್ಟುವ ಮೂಲಕ ಶಿಕ್ಷಣ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದ ಡಾ. ದಂಡಿನ ಅವರು ಶಿಕ್ಷಣದ ಮೂಲಕ ಸಾವಿರಾರು ವಿದ್ಯಾರ್ಥಿಗಳ ಬದುಕು ರೂಪಿಸಿದ ಶಿಕ್ಷಣ ತಪಸ್ವಿಯಾಗಿದ್ದರು.



ಅವರು ಕನಕದಾಸ ಶಿಕ್ಷಣ ಸಮಿತಿಯ ಅಧ್ಯಕ್ಷ ರವೀಂದ್ರನಾಥ ದಂಡಿನ ಸೇರಿದಂತೆ ಇಬ್ಬರು ಪುತ್ರರು, ಮೂವರು ಪುತ್ರಿಯರು, ಮೊಮ್ಮಕ್ಕಳು ಹಾಗೂ ಮರಿಮೊಮ್ಮಕ್ಕಳನ್ನು ಅಗಲಿದ್ದಾರೆ.

ಅಂತಿಮ ದರ್ಶನ ಪಡೆಯಲು ಗದುಗಿನ ಶಿವಾನಂದ ಮಠದ ಉಭಯ ಶ್ರೀಗಳು, ಹರ್ಲಾಪೂರದ ಪೂಜ್ಯ ಶ್ರೀ ಕೊಟ್ಟೂರೇಶ್ವರ ಸ್ವಾಮೀಜಿ, ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಶ್ರೀ ಕಲ್ಲಯ್ಯಜ್ಜನವರು, ಮುಖಂಡರಾದ ಬೈರತಿ ಬಸವರಾಜ, ಮಾಜಿ ಸಂಸದ ಕೆ. ವಿರುಪಾಕ್ಷ, ರಾಜ್ಯಸಭಾ ಸದಸ್ಯ ಮಾ. ನಾಗರಾಜ, ಶಾಸಕರಾದ ಸಿ.ಸಿ. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಕೃಷ್ಣಗೌಡ್ರ ಪಾಟೀಲ, ಫಕ್ಕೀರಪ್ಪ ಹೆಬಸೂರ, ರುದ್ರಣ್ಣ ಗುಳಗುಳಿ, ರಾಜೇಂದ್ರ ಹಾವೇರಿ, ಮೈಲಾರಪ್ಪ ತಳಹಳ್ಳಿ, ಎಸ್.ಎಸ್. ಚವಟಗೇರ ಸೇರಿದಂತೆ ಅನೇಕ ಗಣ್ಯರು ಆಗಮಿಸಿ ಅಂತಿಮ ನಮನ ಸಲ್ಲಿಸಿದರು.

## ನಿಧನ

### ಶ್ರೀಮತಿ ಯಲ್ಲಮ್ಮ ಮುದಿಗೌಡ್ರ



ಹಾವೇರಿ: ತಾಲೂಕಿನ ತಿಮ್ಮೇನಹಳ್ಳಿ ಗ್ರಾಮದ ಶ್ರೀಮತಿ ಯಲ್ಲಮ್ಮ ಕೊಂ ಹನಮಂತಗೌಡ ಮುದಿಗೌಡ್ರ (66) ಅವರು ನಿಧನರಾದರು.

ಮೃತರು ಪತಿ ಹನಮಂತಗೌಡ, ಪುತ್ರರು, ಪುತ್ರಿಯರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಅವರ ಅಂತ್ಯಸಂಸ್ಕಾರವು ಸೋಮವಾರ (ಜೂನ್ 29) ಮಧ್ಯಾಹ್ನ 2 ಗಂಟೆಗೆ ಸ್ವಗ್ರಾಮ ತಿಮ್ಮೇನಹಳ್ಳಿಯಲ್ಲಿ ನೆರವೇರಿತು.

### ಇಮಾಮಸಾಬ ಹೊಸಪೇಟಿ



ಡಂಬಳ: ಗ್ರಾಮದ ಮುಸ್ಲಿಂ ಸಮಾಜದ ಹಿರಿಯರಾದ ಇಮಾಮಸಾಬ ಅಲ್ಲಾವುದ್ದೀನಸಾಬ ಹೊಸಪೇಟಿ (62) ಅವರು ಭಾನುವಾರ ನಿಧನರಾದರು.

ಮೃತರು ಪತ್ನಿ, ಒಬ್ಬ ಪುತ್ರ, ಇಬ್ಬರು ಪುತ್ರಿಯರು, ಇಬ್ಬರು ತಮ್ಮಂದಿರು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಅವರ ನಿಧನಕ್ಕೆ ಮಿಥುನ ಜಿ. ಪಾಟೀಲ, ಧರ್ಮಗುರುಗಳಾದ ಖಾದರಸಾಬ ಮುಲ್ಲಾ, ಬಶೀರಹಮ್ಮದ ತಾಂಬೋಟಿ, ಸಿದ್ದಪ್ಪ ನಂಜಪ್ಪನವರ, ಬಸುರಡ್ಡಿ ಬಂಡಿಹಾಳ, ಬಾಬುಸಾಬ ಮೂಲಿಮನಿ, ಬಾಬುಸಾಬ ಸರಕಾವಾಸ, ಜಿ.ಎಸ್. ಕೊರ್ಲಹಳ್ಳಿ, ಹುಸೇನಸಾಬ ದೊಡ್ಡಮನಿ, ಬುಡ್ನೆಸಾಬ ಅತ್ತಾರ, ಹುಸೇನಸಾಬ ಹೊಸಬಾವಿ, ಮುರ್ತುಜಾ ಮನಿಯಾರ, ಮುದಿಯಪ್ಪ ಗದಗಿನ, ಮಲ್ಲಣ್ಣ ಗಡಗಿ, ಸಿ.ಟಿ. ಪ್ಯಾಟಿ ಸೇರಿದಂತೆ ಹಿರಿಯರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

# ಡಿಎಸ್ಎಸ್ ಸಂಚಾಲಕರಾಗಿ ಸುರೇಶ ನಂದೆಣ್ಣವರ ನೇಮಕ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ)ಯ ಲಕ್ಷ್ಮೇಶ್ವರ ತಾಲೂಕು ಸಂಚಾಲಕರಾಗಿ ಸುರೇಶ ನಂದೆಣ್ಣವರ ಅವರನ್ನು ನೇಮಕ ಮಾಡಲಾಗಿದೆ.

ರಾಜ್ಯ ಸಂಘಟನಾ ಸಂಚಾಲಕ ಎಸ್.ಎನ್. ಬಳ್ಳಾರಿ ಹಾಗೂ ಗದಗ ಜಿಲ್ಲಾ ಸಂಚಾಲಕ ದುರ್ಗಪ್ಪ ಎಲ್.ಎಚ್. ಅವರು ಭಾನುವಾರ ನೇಮಕಾತಿ ಆದೇಶ ನೀಡಿ, ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಪ್ರೊ. ಬಿ. ಕೃಷ್ಣಪ್ಪ ಅವರ ತತ್ವ-ಸಿದ್ಧಾಂತಗಳಿಗೆ ಬದ್ಧರಾಗಿ ಶೋಷಿತ ಸಮುದಾಯಗಳ ಏಳಿಗೆ, ಸಾಮಾಜಿಕ ನ್ಯಾಯ ಮತ್ತು ಸಂಘಟನೆಯ ಬಲವರ್ಧನೆಗೆ ಶ್ರಮಿಸುವಂತೆ ಸೂಚಿಸಿದರು.

ಸಂಘಟನೆಯ ತಾಲೂಕು ಪದಾಧಿಕಾರಿಗಳನ್ನೂ ನೇಮಕ ಮಾಡಲಾಯಿತು. ಕೋಟೆಪ್ಪ ವರ್ದಿ, ನಾಗರಾಜ ದೊಡ್ಡಮನಿ, ಗುಡ್ಡಪ್ಪ ಮತ್ತೂರು, ಮಂಜುನಾಥ ಸೀತಮ್ಮನವರ, ಶಿವಾನಂದ ಮಾದರ, ಮಲ್ಲಿಕಾರ್ಜುನ ಪೂಜಾರ ಹಾಗೂ ಬಸವರಾಜ ಗೋದಿ ಅವರನ್ನು ಸಂಘಟನಾ ಸಂಚಾಲಕರಾಗಿ ನೇಮಕ ಮಾಡಲಾಯಿತು. ಗೋಣೆಪ್ಪ ಹರಿಜನ ಅವರನ್ನು ಖಜಾಂಚಿಯಾಗಿ ಹಾಗೂ ಹನಮಂತಪ್ಪ ಮಾದರ, ಬಸವರಾಜ ಹೆಚ್., ಶಿವಾನಂದ ತಳಗೇರಿ ಮತ್ತು ಶಿವಾನಂದ ಕಡೆಮನಿ ಅವರನ್ನು ಕಾರ್ಯಕಾರಿ ಸಮಿತಿ ಸದಸ್ಯರನ್ನಾಗಿ ಆಯ್ಕೆ ಮಾಡಲಾಯಿತು.

ನೂತನ ಪದಾಧಿಕಾರಿಗಳು ಸಂಘಟನೆಯ ಆಶಯಗಳಿಗೆ ಅನುಗುಣವಾಗಿ ಸಮಾಜಮುಖಿ ಕಾರ್ಯಗಳನ್ನು ಕೈಗೊಂಡು ಶೋಷಿತ ಸಮುದಾಯಗಳ ಹಕ್ಕುಗಳ ರಕ್ಷಣೆ ಹಾಗೂ ಸಂಘಟನೆಯ ವಿಸ್ತರಣೆಗೆ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವ ಸಂಕಲ್ಪ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸಂಘಟನಾ ಸಂಚಾಲಕ ದುರ್ಗಪ್ಪ ಎಲ್.ಎಚ್., ಗಾಳೆಪ್ಪ ಎಚ್. ಹರಿಜನ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಗದಗ ಜಿಲ್ಲೆಯಲ್ಲಿ 22 ಸಾವಿರಕ್ಕೂ ಹೆಚ್ಚು ಅರ್ಹ ರೈತರು ಮಧ್ಯಂತರ ಪರಿಹಾರದಿಂದ ವಂಚಿತ

# ವಿಮೆ ಕಟ್ಟಿದ ರೈತರಿಗೆ ಪರಿಹಾರವೇ ಮರೀಚಿಕೆ..!

■ ವಿಜಯಸಾಕ್ಷಿ ಸುದ್ದಿ, ಡಂಬಳ

ಗದಗ ಜಿಲ್ಲೆಯಲ್ಲಿ 2025-26ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆವಿಮೆ ಮಾಡಿಸಿದ ಸಾವಿರಾರು ರೈತರಿಗೆ ಮಧ್ಯಂತರ ಪರಿಹಾರ ದೊರೆಯದೆ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಅರ್ಹರಾಗಿದ್ದರೂ 22 ಸಾವಿರಕ್ಕೂ ಹೆಚ್ಚು ರೈತರಿಗೆ ಪರಿಹಾರ ನೀಡದಿರುವುದು ಸರ್ಕಾರ ಹಾಗೂ ವಿಮಾ ಕಂಪನಿಗಳ ನಿರ್ಲಕ್ಷ್ಯ ಎಂದು ಅಖಿಲ ಕರ್ನಾಟಕ ಕಿಸಾನ್ ಜಾಗೃತಿ ಸಂಘ ಆರೋಪಿಸಿದೆ.

ಜಿಲ್ಲೆಯಲ್ಲಿ ಒಟ್ಟು 52,013 ರೈತರು ಬೆಳೆವಿಮೆ ಮಾಡಿಸಿದ್ದು, ಕಳೆದ ವರ್ಷ ವಾಡಿಕೆಗಿಂತ ಅಧಿಕ ಮಳೆಯಾಗಿ ಬೆಳೆ ನಷ್ಟ ಅನುಭವಿಸಿದ್ದಾರೆ. ನಿಯಮಾನುಸಾರ ಟೋಲ್‌ಫ್ರೀ ಸಂಖ್ಯೆಗೆ ದೂರು ಸಲ್ಲಿಸಿದ ರೈತರಿಗೆ ವಿಮಾ ಕಂಪನಿ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಮಧ್ಯಂತರ ಪರಿಹಾರ ನೀಡಬೇಕಾಗಿತ್ತು.

ಸಂಘದ ಪ್ರಕಾರ, 38,177 ರೈತರು ಟೋಲ್‌ಫ್ರೀ ಸಂಖ್ಯೆಗೆ ಕರೆ ಮಾಡಿ ದೂರು ದಾಖಲಿಸಿದ್ದರು. ಇವರಲ್ಲಿ ಮೊದಲ ಹಂತದಲ್ಲಿ 9,687 ರೈತರಿಗೆ ಹಾಗೂ ಎರಡನೇ ಹಂತದಲ್ಲಿ 3,020 ರೈತರಿಗೆ ಮಾತ್ರ ಪರಿಹಾರ ಜಮೆಯಾಗಿದ್ದು, ಒಟ್ಟು 12,707 ರೈತರಿಗೆ ಮಾತ್ರ ಮಧ್ಯಂತರ ಪರಿಹಾರ ದೊರೆತಿದೆ.

ಇನ್ನೂ 22,356 ರೈತರು ಅರ್ಹರಾಗಿದ್ದರೂ ಪರಿಹಾರದಿಂದ ವಂಚಿತರಾಗಿದ್ದಾರೆ. ಅಲ್ಲದೆ 3,114 ರೈತರ ಜಮೀನುಗಳನ್ನು ಸಮರ್ಪಕ ಪರಿಶೀಲನೆ ನಡೆಸದೇ 'ಪಾಳು ಭೂಮಿ' ಎಂದು ನಮೂದಿಸಿ ಪರಿಹಾರವನ್ನು ತಿರಸ್ಕರಿಸಲಾಗಿದೆ ಎಂದು ಆರೋಪಿಸಲಾಗಿದೆ.



“ಅರ್ಹ ರೈತರಿಗೆ ಬೆಳೆವಿಮೆ ಪರಿಹಾರ ನೀಡದಿರುವುದು ಅನ್ನದಾತರ ಮೇಲಿನ ಅನ್ಯಾಯ. ಸರ್ಕಾರ ಹಾಗೂ ವಿಮಾ ಕಂಪನಿ ಕೂಡಲೇ ಬಾಕಿ ಇರುವ ಮಧ್ಯಂತರ ಪರಿಹಾರ ಬಿಡುಗಡೆ ಮಾಡಬೇಕು.”

**– ಯಲ್ಲಪ್ಪಗೌಡ್ರ ಕರಮುಡಿ,** ಜಿಲ್ಲಾಧ್ಯಕ್ಷರು, ಅಖಿಲ ಕರ್ನಾಟಕ ಕಿಸಾನ್ ಜಾಗೃತಿ ಸಂಘ



ವಿಮೆ ಸಮೀಕ್ಷೆ ವೇಳೆ ಅಧಿಕಾರಿಗಳು ಪ್ರತಿ ಜಮೀನಿನ ಸಮರ್ಪಕ ಪರಿಶೀಲನೆ ನಡೆಸದೆ, ಒಂದೇ ಸರ್ವೆ ನಂಬರ್ ಆಧರಿಸಿ ವರದಿ ಸಲ್ಲಿಸಿದ್ದರಿಂದ ಬೆಳೆ ಬೆಳೆದಿದ್ದ ಜಮೀನುಗಳನ್ನೂ ಪಾಳು ಎಂದು ದಾಖಲಿಸಿ ನೈಜ ರೈತರಿಗೆ ಅನ್ಯಾಯ ಮಾಡಲಾಗಿದೆ ಎಂದು ರೈತರು ದೂರಿದ್ದಾರೆ.

ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆಗಳಾದ ಒಣ ಮೆಣಸಿನಕಾಯಿ ಹಾಗೂ ಗೋವಿನ ಜೋಳ ಬೆಳೆದ ರೈತರಿಗೆ ಪೂರ್ಣ ಪ್ರಮಾಣದ ವಿಮಾ ಪರಿಹಾರ ಇನ್ನೂ ದೊರೆತಿಲ್ಲ. ಅಗತ್ಯ ದಾಖಲೆಗಳನ್ನು ಸಕಾಲಕ್ಕೆ ಸಲ್ಲಿಸಿದ್ದರೂ ವಿಮಾ ಕಂಪನಿ ಹಾಗೂ ಸಂಬಂಧಿಸಿದ ಅಧಿಕಾರಿಗಳು ಸ್ಪಂದಿಸುತ್ತಿಲ್ಲ ಎಂದು ರೈತರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ವರ್ಷದ ಮುಂಗಾರು ಹಂಗಾಮಿನಲ್ಲಿ ರೈತರು ಬಿತ್ತನೆಗೆ ಹಣವಿಲ್ಲದೆ ಸಂಕಷ್ಟ ಎದುರಿಸುತ್ತಿದ್ದು, ಕಳೆದ ಸಾಲಿನ ಬೆಳೆವಿಮೆ ಪರಿಹಾರ ಸಿಕ್ಕಿದ್ದರೆ ಅದು ಆಸರೆಯಾಗುತ್ತಿತ್ತು. ಈ ಹಿನ್ನೆಲೆಯಲ್ಲಿ ಜಿಲ್ಲೆಯ ಸಂಸದರು, ಶಾಸಕರು ಹಾಗೂ ಹಿರಿಯ ಅಧಿಕಾರಿಗಳು ಮಧ್ಯಪ್ರವೇಶಿಸಿ ಅರ್ಹ ರೈತರಿಗೆ ಶೀಘ್ರದಲ್ಲೇ ಬೆಳೆವಿಮೆ ಪರಿಹಾರ ಒದಗಿಸಬೇಕು ಎಂದು ಅಖಿಲ ಕರ್ನಾಟಕ ಕಿಸಾನ್ ಜಾಗೃತಿ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪಗೌಡ್ರ ಕರಮುಡಿ ಆಗ್ರಹಿಸಿದ್ದಾರೆ.

## ತಿಮ್ಮಾಪೂರದಲ್ಲಿ ಗುರುಗಳನ್ನು ಮೆರವಣಿಗೆಯಲ್ಲಿ ಕರೆತಂದು ಸನ್ಮಾನ; 'ಗುರುಬ್ರಹ್ಮ' ಕಾರ್ಯಕ್ರಮ ಭಾವನಾತ್ಮಕ ಕ್ಷಣಗಳಿಗೆ ಸಾಕ್ಷಿ!

# ಗುರು ಋಣ ತೀರಿಸಿದ ಶಿಷ್ಯರು..!

■ ವಿಜಯಸಾಕ್ಷಿ ಸುದ್ದಿ, ಗದಗ

ಗುರು-ಶಿಷ್ಯರ ಸಂಬಂಧಕ್ಕೆ ಅಪರೂಪದ ಸಾಕ್ಷಿಯಾದ ಕಾರ್ಯಕ್ರಮವೊಂದು ಗದಗ ತಾಲೂಕಿನ ತಿಮ್ಮಾಪೂರ ಗ್ರಾಮದಲ್ಲಿ ಭಾನುವಾರ ನಡೆಯಿತು. ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ 1988ರಿಂದ 2026ರವರೆಗಿನ ಹಳೆ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಆಯೋಜಿಸಿದ್ದ 'ಗುರುಬ್ರಹ್ಮ' ಗುರು ವಂದನೆ, ಸ್ನೇಹ ಸಮ್ಮಿಲನ ಹಾಗೂ ನಿವೃತ್ತ ಶಿಕ್ಷಕರ ಸನ್ಮಾನ ಕಾರ್ಯಕ್ರಮ ಭಾವಪೂರ್ಣ ಕ್ಷಣಗಳಿಗೆ ಸಾಕ್ಷಿಯಾಯಿತು.

ಸತತ 32 ವರ್ಷಗಳ ಕಾಲ ತಿಮ್ಮಾಪೂರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೇವೆ ಸಲ್ಲಿಸಿ ಸಾವಿರಾರು ವಿದ್ಯಾರ್ಥಿಗಳ ಬದುಕಿಗೆ ದಾರಿದೀಪವಾಗಿದ್ದ ನಿವೃತ್ತ ಶಿಕ್ಷಕ ಜೆ.ಜೆ. ಹಿರೇಹಾಳ ಅವರನ್ನು ಹಳೆ ವಿದ್ಯಾರ್ಥಿಗಳು ಗ್ರಾಮದಲ್ಲಿ ಅದ್ದೂರಿ ಮೆರವಣಿಗೆ ಮೂಲಕ ಕರೆತಂದು ಮಾರುತೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ಆತ್ಮೀಯವಾಗಿ ಸನ್ಮಾನಿಸಿದರು.



ಇದೇ ಸಂದರ್ಭದಲ್ಲಿ ನಿವೃತ್ತ ಶಿಕ್ಷಕರಾದ ಎಸ್.ಆರ್. ಕಲ್ಲೂರು, ಎಸ್.ಜಿ. ಕಲ್ಲಳ್ಳಿ, ಟಿ.ಎನ್. ಬಾಕಳೆ, ಪಿ.ಎನ್. ಅಡ್ಡೂರ, ಪಟ್ಟೇದ, ಕಿಡಿಯಪ್ಪನವರ ಹಾಗೂ ಐ.ಕೆ. ಶಾಂತಗಿರಿ ಅವರಿಗೂ ಗುರು ವಂದನೆ ಸಲ್ಲಿಸಿ ಸನ್ಮಾನಿಸಲಾಯಿತು.

“ಶಿಕ್ಷಣವೆಂದರೆ ಕೇವಲ ಅಕ್ಷರಜ್ಞಾನವಲ್ಲ; ಸಂಸ್ಕಾರ, ಶಿಸ್ತು, ಪ್ರಾಮಾಣಿಕತೆ ಮತ್ತು ಸಮಾಜದ ಬಗೆಗಿನ ಕಾಳಜಿಯೇ ನಿಜವಾದ ಶಿಕ್ಷಣ. ಗುರು-ಶಾಲೆಯ ಋಣವನ್ನು ಎಂದಿಗೂ ಮರೆಯಬೇಡಿ.”

**– ಜೆ.ಜೆ. ಹಿರೇಹಾಳ,** ನಿವೃತ್ತ ಶಿಕ್ಷಕ

ಸನ್ಮಾನ ಸ್ವೀಕರಿಸಿ ಮಾತನಾಡಿದ ಜೆ.ಜೆ. ಹಿರೇಹಾಳ, ಅಕ್ಷರ ದಾಸೋಹ ಮಾಡಿದ ಗುರುಗಳನ್ನು ನೆನಪಿಸಿ ಗೌರವಿಸುವುದು ಶಿಷ್ಯರ ದೊಡ್ಡ ಸಂಸ್ಕಾರವಾಗಿದೆ. ಶಿಕ್ಷಣವೆಂದರೆ ಕೇವಲ ಪುಸ್ತಕದ ಜ್ಞಾನವಲ್ಲ, ಸಂಸ್ಕಾರ, ಶಿಸ್ತು, ಪ್ರಾಮಾಣಿಕತೆ ಹಾಗೂ ಸಮಾಜದ ಬಗೆಗಿನ ಕಾಳಜಿಯೇ ನಿಜವಾದ ಶಿಕ್ಷಣವಾಗಿದೆ. ತಾವು ಕಲಿಸಿದ ವಿದ್ಯಾರ್ಥಿಗಳು ಇಂದು ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸ್ಥಾನದಲ್ಲಿರುವುದೇ ತಮ್ಮ 32 ವರ್ಷದ ಸೇವೆಗೆ ಸಿಕ್ಕ ಅತಿದೊಡ್ಡ ಪ್ರಶಸ್ತಿ ಎಂದು ಭಾವುಕರಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ಇತ್ತೀಚೆಗೆ ನಿಧನರಾದ ಕನಕದಾಸ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ. ಬಿ.ಎಫ್. ದಂಡಿನ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಅಕ್ಷರ ದಾಸೋಹ ಅಧಿಕಾರಿ ಶಂಕರ ಹಡಗಲಿ, ಸಿ.ಆರ್.ಪಿ. ಮೀರಾನಾಯಕ, ಮುಖ್ಯೋಪಾಧ್ಯಾಯೆ ಶ್ರೀಮತಿ ಎಲ್.ಎಂ. ಶೇಷಗಿರಿ, ಎಸ್.ಡಿ.ಎಂ.ಸಿ. ಅಧ್ಯಕ್ಷ ನಾಗರಾಜ ಮುಶಿಗೇರಿ ಸೇರಿದಂತೆ ಹಳೆ ವಿದ್ಯಾರ್ಥಿಗಳು, ಶಾಲೆಯ ಅಭಿಮಾನಿಗಳು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಕಾರ್ಯಕ್ರಮವನ್ನು ಗೊಳಪ್ಪ ಹಚ್ಚಪ್ಪನವರ, ಅಣ್ಣಪ್ಪ ಹಳ್ಳಿ ಹಾಗೂ ಮಂಜುನಾಥ ಹಿಂಡಿವಳಿ ನಿರೂಪಿಸಿದರು.

## ತಿಮ್ಮಾಪೂರದಲ್ಲಿ ನಡೆದ ಪೋಲಿಯೊ ಅಭಿಯಾನದಲ್ಲಿ ಯಲ್ಲಪ್ಪ ಬಾಬರಿ ಅಭಿಮತ

# ಪ್ರತಿ ಮಗುವಿಗೂ ಪೋಲಿಯೊ ಲಸಿಕೆ ಕಡ್ಡಾಯ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನ ತಿಮ್ಮಾಪೂರ ಗ್ರಾಮದಲ್ಲಿ ರಾಷ್ಟ್ರೀಯ ಪೋಲಿಯೊ ನಿರ್ಮೂಲನಾ ಕಾರ್ಯಕ್ರಮದ ಅಂಗವಾಗಿ ವಿಶೇಷ ಪೋಲಿಯೊ ಲಸಿಕಾ ಅಭಿಯಾನ ಯಶಸ್ವಿಯಾಗಿ ನಡೆಯಿತು.

ಅಭಿಯಾನಕ್ಕೆ ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ಚಾಲನೆ ನೀಡಿ, ಒಂದರಿಂದ ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೂ ತಪ್ಪದೇ ಎರಡು ಹನಿ ಪೋಲಿಯೊ ಲಸಿಕೆ ಹಾಕಿಸಿ, ಭವಿಷ್ಯದಲ್ಲಿ ಎದುರಾಗಬಹುದಾದ ಅಂಗವೈಕಲ್ಯವನ್ನು ತಡೆಗಟ್ಟುವಂತೆ ಪೋಷಕರಿಗೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಹಾಯಕ ವೈದ್ಯೆ ಗಂಗಮ್ಮ ಕುಂಬಾರ, ಪೋಲಿಯೊ ಲಸಿಕೆ ಸಂಪೂರ್ಣ ಸುರಕ್ಷಿತವಾಗಿದ್ದು, ಯಾವುದೇ ಅಡ್ಡಪರಿಣಾಮಗಳಿಲ್ಲ. ಲಸಿಕೆ ಪಡೆಯದ ಮಕ್ಕಳಲ್ಲಿ ಭವಿಷ್ಯದಲ್ಲಿ ಆರೋಗ್ಯ ಸಮಸ್ಯೆಗಳ ಅಪಾಯ ಇರುವುದರಿಂದ ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಪೋಷಕರು ಕಾಳಜಿ ವಹಿಸಬೇಕು ಎಂದು ತಿಳಿಸಿದರು.



“ಪೋಲಿಯೊ ಮುಕ್ತ ಭಾರತ ನಿರ್ಮಾಣಕ್ಕೆ ಪ್ರತಿಯೊಂದು ಮಗುವಿಗೂ ಎರಡು ಹನಿ ಲಸಿಕೆ ತಲುಪಿಸುವುದು ನಮ್ಮೆಲ್ಲರ ಜವಾಬ್ದಾರಿ.”

**– ಯಲ್ಲಪ್ಪ ಎಚ್. ಬಾಬರಿ,** ಅಧ್ಯಕ್ಷ, ಕರ್ನಾಟಕ ರಾಜ್ಯ ರೈತ ಸಂಘ, ಗದಗ

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷೆ ರೇಣವ್ವ ಸೋಮಾಪೂರ, ಅಂಗನವಾಡಿ ಕಾರ್ಯಕರ್ತೆಯರಾದ ಲಕ್ಷ್ಮೀ, ಶಂಕ್ರಮ್ಮ, ವಿದ್ಯಾ, ದೇವಕ್ಕ ಆಲೂರು, ಶೃತಿ ತುಪ್ಪದ, ಸತ್ಯಮ್ಮ ಮಣ್ಣೂರ, ವಿಜಯಲಕ್ಷ್ಮೀ ಉಂಡಿ, ಶಾರದಾ ಗೋಂದಿ ಸೇರಿದಂತೆ ಆಶಾ ಕಾರ್ಯಕರ್ತೆಯರು, ಆರೋಗ್ಯ ಇಲಾಖೆ ಸಿಬ್ಬಂದಿ ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

## ಗದಗ-ಬೆಟಗೇರಿ ನಗರಸಭೆಯಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ: ನೂರಾರು ಸಿಬ್ಬಂದಿ ಭಾಗಿ

# ಪೌರಕಾರ್ಮಿಕರ ಆರೋಗ್ಯ ರಕ್ಷಣೆಗೆ ವಿಶೇಷ ಹೆಜ್ಜೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ನಗರಸಭೆಯ ಪೌರಕಾರ್ಮಿಕರು ಹಾಗೂ ಸ್ವಚ್ಛತಾ ಕೆಲಸಗಾರರಿಗಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ನಗರಸಭೆ ಆವರಣದಲ್ಲಿ ಆಯೋಜಿಸಲಾಯಿತು.

ಶಿಬಿರದಲ್ಲಿ ಸಕ್ಕರೆ ಕಾಯಿಲೆ, ರಕ್ತದೊತ್ತಡ, ಬಾಯಿ ಕ್ಯಾನ್ಸರ್, ಮೆದುಳು ಆರೋಗ್ಯ ಹಾಗೂ ಹೃದಯ ಸಂಬಂಧಿತ ಕಾಯಿಲೆಗಳ ತಪಾಸಣೆಯನ್ನು ನುರಿತ ವೈದ್ಯರು ನಡೆಸಿ ಅಗತ್ಯ ಆರೋಗ್ಯ ಸಲಹೆಗಳನ್ನು ನೀಡಿದರು. ಸ್ವಚ್ಛತಾ ಕಾರ್ಯದಲ್ಲಿ ನಿರಂತರ ತೊಡಗಿರುವ ಪೌರಕಾರ್ಮಿಕರ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು.

“ನಗರದ ಸ್ವಚ್ಛತೆಯ ಹೊಣೆ ಹೊತ್ತಿರುವ ಪೌರಕಾರ್ಮಿಕರ ಆರೋಗ್ಯ ರಕ್ಷಣೆಗೂ ನಗರಸಭೆ ಸಮಾನ ಆದ್ಯತೆ ನೀಡುತ್ತಿದೆ. ಇಂತಹ ಆರೋಗ್ಯ ತಪಾಸಣಾ ಶಿಬಿರಗಳು ಅವರ ಆರೋಗ್ಯ ಕಾಪಾಡಲು ಸಹಕಾರಿಯಾಗಲಿವೆ.”

**– ರಾಜಾರಾಮ ಪವಾರ್, ಪೌರಾಯುಕ್ತರು, ಗದಗ-ಬೆಟಗೇರಿ ನಗರಸಭೆ**

ಕಾರ್ಯಕ್ರಮದಲ್ಲಿ ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಗೋಪಾಲ್, ನಗರಸಭೆ ಸಹಾಯಕ ಕಾರ್ಯಪಾಲಕ ಅಭಿಯಂತರ (ಪರಿಸರ) ಆನಂದ ಬದಿ, ಕಂದಾಯ ಅಧಿಕಾರಿ ಮಹೇಶ್ ಹಡಪದ, ಜಿಲ್ಲಾ ಪೌರಕಾರ್ಮಿಕರ ಸಂಘದ ಅಧ್ಯಕ್ಷ ಹೇಮೇಶ್ ಯಟ್ಟಿ, ಆರೋಗ್ಯ ಇಲಾಖೆಯ ಸಿಬ್ಬಂದಿ, ಕಮ್ಯುನಿಟಿ ಮೊಬೈಲೈಜರ್‌ಗಳು, ಪೌರಕಾರ್ಮಿಕರು ಹಾಗೂ ಸ್ವಚ್ಛತಾ ಕೆಲಸಗಾರರು ಉಪಸ್ಥಿತರಿದ್ದರು.

## ಹಗರಿಬೊಮ್ಮನಹಳ್ಳಿಯಲ್ಲಿ ಖಿದ್ಮತ್ ಕಮಿಟಿಯ ಪ್ರಥಮ ಪ್ರತಿಭಾ ಪುರಸ್ಕಾರ

# ಪ್ರತಿಭೆಗೆ ಗೌರವ... ಸಾಧನೆಗೆ ಹೊಸ ಪ್ರೇರಣೆ..!

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ವಿದ್ಯಾರ್ಥಿಗಳು ಶಿಕ್ಷಣದಲ್ಲಿ ಸಾಧನೆ ಮಾಡಿ ಉನ್ನತ ಹುದ್ದೆಗಳನ್ನು ಅಲಂಕರಿಸುವ ಮೂಲಕ ಸಮಾಜಕ್ಕೆ ಮಾದರಿಯಾಗಬೇಕು ಎಂದು ಅಮ್ಮನಗರ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಅಧ್ಯಕ್ಷೆ ಡಾ. ಸಾಹಿರಾಬಾನು ಕರೆ ನೀಡಿದರು.

ಪಟ್ಟಣದ ಕನ್ನಿಕಾಪರಮೇಶ್ವರಿ ಕಲ್ಯಾಣ ಮಂಟಪದಲ್ಲಿ ಹಗರಿಬೊಮ್ಮನಹಳ್ಳಿ ತಾಲೂಕು ಖಿದ್ಮತ್ ಕಮಿಟಿ ವತಿಯಿಂದ ಆಯೋಜಿಸಿದ್ದ ಪ್ರಥಮ ವರ್ಷದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಅವರು ಮಾತನಾಡಿದರು. “ಬಹುತೇಕ ಮುಸ್ಲಿಮರು ಕಾಯಕನಿಷ್ಠರು. ದುಡಿಮೆಯೊಂದಿಗೆ ಸೇವಾ ಮನೋಭಾವ ಬೆಳೆಸಿಕೊಳ್ಳಬೇಕು. ನಾವು ಮಾಡುವ ಕಾಯಕ ಮತ್ತು ಸೇವೆಯಲ್ಲಿಯೇ ದೇವರು ಅಡಗಿದ್ದಾನೆ” ಎಂದು ಹೇಳಿದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲೂಕು ಖಿದ್ಮತ್ ಕಮಿಟಿ ಅಧ್ಯಕ್ಷ ಎಚ್. ಜಂದಿಸಾಹೇಬ್ ಮಾತನಾಡಿ, ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಗೌರವಿಸುವ ಮೂಲಕ ಇತರ ವಿದ್ಯಾರ್ಥಿಗಳಿಗೂ ಪ್ರೇರಣೆ ನೀಡುವುದು ಪುರಸ್ಕಾರದ ಉದ್ದೇಶವಾಗಿದೆ. ತಾಲೂಕಿನ ವಿವಿಧ ಗ್ರಾಮಗಳಿಗೆ ತೆರಳಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಸನ್ಮಾನಿಸಲಾಗುತ್ತಿದೆ. ಪರಸ್ಪರ ಸಹಕಾರದಿಂದ ಮಾತ್ರ ಇಂತಹ ಉತ್ತಮ ಕಾರ್ಯಗಳು ಸಾಧ್ಯ ಎಂದರು.

ಪುರಸಭೆಯ ಮಾಜಿ ಅಧ್ಯಕ್ಷ ಎಂ. ಮರಿರಾಮಪ್ಪ ಮಾತನಾಡಿ, ವಿದ್ಯಾರ್ಥಿಗಳು ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಆದರ್ಶಗಳನ್ನು ಅಳವಡಿಸಿಕೊಂಡು ಪರಿಶ್ರಮದ ಮೂಲಕ ಉನ್ನತ ಗುರಿ ಸಾಧಿಸಿ ದೇಶಕ್ಕೆ ಕೊಡುಗೆ ನೀಡಬೇಕು ಎಂದು ಸಲಹೆ ನೀಡಿದರು.

“ವಿದ್ಯಾರ್ಥಿಗಳು ಶೈಕ್ಷಣಿಕ ಪ್ರಗತಿ ಸಾಧಿಸಿ ಉನ್ನತ ಹುದ್ದೆಗಳನ್ನು ಅಲಂಕರಿಸುವ ಮೂಲಕ ಸಮಾಜಕ್ಕೆ ಮಾದರಿಯಾಗಬೇಕು.”

– ಡಾ. ಸಾಹಿರಾಬಾನು, ಅಧ್ಯಕ್ಷೆ, ಅಮ್ಮನಗರ ಗ್ರಾಮೀಣ ಅಭಿವೃದ್ಧಿ ಸಂಸ್ಥೆ

ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿವಿಧ ಗ್ರಾಮಗಳ 100 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಉಪ ತಹಸೀಲ್ದಾರ್ ಆಸೀಫ್, ನಿವೃತ್ತ ಯೋಧರಾದ ನೂರ್ ಮಹಮ್ಮದ್ ಹಾಗೂ ರಾಮರೆಡ್ಡಿ ಅವರನ್ನು ಸನ್ಮಾನಿಸಲಾಯಿತು.

ಪುರಸಭೆ ಅಧ್ಯಕ್ಷೆ ರೇಷ್ಮಾ ಸಿಕಂದರ್ ಕಾರ್ಯಕ್ರಮ ಉದ್ಘಾಟಿಸಿದರು.

ವೇದಿಕೆಯಲ್ಲಿ ಪುರಸಭೆ ಸದಸ್ಯ ಪವಾಡಿ ಹನುಮಂತಪ್ಪ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಅಕ್ಕಿ ತೋಟೇಶ್, ಗ್ಯಾರಂಟಿ ಸಮಿತಿಯ ಗುರುಬಸವರಾಜ ಸೊನ್ನದ್, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಹಾಲ್ದಾಳ್ ವಿಜಯಕುಮಾರ್ ಮಾತನಾಡಿದರು. ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಚಿಂತ್ರಪಳ್ಳಿ ದೇವೇಂದ್ರಪ್ಪ, ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಕೋರಿ ಗೋಣಿಬಸಪ್ಪ, ರಫೀ, ಆಟೋ ರಾಜ, ಮೆಕಾನಿಕ್ ರಾಜು, ಬುಡೇನ್ ಸಾಬ್, ಚಾಂದ್ ಬಾಷಾ, ಬಿ. ಬಾಷಾಸಾಬ್, ಹಸನ್ ಷರೀಫ್, ಟೈಲರ್ ಶಬೀರ್, ಎನ್.ಎಂ. ಗೌಸ್, ನಜೀರ್ ಬಾಷಾ, ಎಚ್.ಎಸ್. ದಾದಾಪೀರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಎಚ್. ಅನೀಸ್ ಕಾರ್ಯಕ್ರಮ ನಿರ್ವಹಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka